ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 84

16–9–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 84

## ಲೇಟ್ ನೈಟ್ ಕೊಪ್ಪದಲ್ಲಿ ಕಾಡಾನೆ ಪ್ರದಕ್ಷಿಣೆ : ಗ್ರಾಮಸಿಂಹದೊಂದಿಗೆ ಮುಖಾಮುಖಿ

### ಕೊಪ್ಪದಿಂದ ತೆರಳಿದ ಗಜಜೋಡಿ



**ಕೊಪ್ಪ:** ಬಾಳಗಡಿ, ಗಬ್ಬಾನೆ, ನಿಲುಗುಳಿ, ಕುಬ್ರಿಉಬ್ಬು ಭಾಗದಲ್ಲಿ ರೌಂಡ್ಸ್ ಹಾಕಿ ಶನಿವಾರ ಮಧ್ಯಾಹ್ನ ಕುಂಬ್ರಿಉಬ್ಬಿನ ಪ್ಲಾಂಟೇಷನ್‌ನಲ್ಲಿ ಗಂಟೆಗಳ ಕಾಲ ಮಲಗಿ ನಿದ್ರಿಸಿದ್ದ ಗಜಜೋಡಿ ರಾತ್ರಿ 12 ಗಂಟೆ ಸುಮಾರಿಗೆ ಕೊಪ್ಪ ಪಟ್ಟಣದ ದ್ಯಾವೇಗೌಡ ವೃತ್ತದ ಬಳಿ ಪ್ರದಕ್ಷಿಣೆ ಹಾಕಿದೆ.

ಕಾಡಾನೆ ಎಲ್ಲಿದೆ, ಇಲ್ಲಿದೆ ಎಂಬ ಒಂದಷ್ಟು ಸುದ್ದಿಯ ಜೊತೆಗೆ ನಿದ್ರೆಗೆ ಜಾರಿದ್ದ ಕೊಪ್ಪ ಜನತೆಯನ್ನು ಕಂಡ ಜೋಡಿ ಕಾಡಾನೆ ಬೇಲಿಹಳ್ಳಿ ಮೂಲಕ ಕೊಪ್ಪ ಗ್ರಾಮಾಂತರ ಗ್ರಾಮ ಪಂಚಾಯಿತಿ ಕಾರ್ಯಾಲಯ, ಸರ್ಕಾರಿ ಆಸ್ಪತ್ರೆ, ದ್ಯಾವೇಗೌಡ ವೃತ್ತದಲ್ಲಿರುವ ಪೆಟ್ರೋಲ್ ಬಂಕ್ ಪಕ್ಕದಲ್ಲಿ ಪ್ರದಕ್ಷಿಣೆ ಹಾಕಿ ಗ್ರಾಮಸಿಂಹ (ನಾಯಿ)ದೊಂದಿಗೆ ಮುಖಾಮುಖಿಯಾಗಿ. ಮುಂದೆ ಸಾಗಿದೆ.

## ಪ್ರಿಯಾಂಕಾ–ಉಪೇಂದ್ರ ಮೊಬೈಲ್ ಹ್ಯಾಕ್: ದುಡ್ಡು ಕೇಳಿದ್ರೆ ಕೊಡಬೇಡಿ; ರಿಯಲ್ ಸ್ಟಾರ್ ಮನವಿ

**ಬೆಂಗಳೂರು:** ರಿಯಲ್ ಸ್ಟಾರ್ ಉಪೇಂದ್ರ ಹಾಗೂ ಅವರ



ಪತ್ನಿ ಪ್ರಿಯಾಂಕಾ ಉಪೇಂದ್ರ ಅವರ ಮೊಬೈಲ್ ಹ್ಯಾಕ್ ಆಗಿದ್ದು, ಈ ಬಗ್ಗೆ ಉಪೇಂದ್ರ ಅವರು ಸೋಷಿಯಲ್ ಮೀಡಿಯಾದಲ್ಲಿ ಮಾಹಿತಿ ನೀಡಿದ್ದಾರೆ.

ತಮ್ಮ ಹೆಸರು ಹೇಳಿಕೊಂಡು ಯಾರಾದರೂ ದುಡ್ಡು ಕೇಳಿದ್ರೆ ಕೊಡಬೇಡಿ ಎಂದು ಉಪೇಂದ್ರ ಅವರು ಮನವಿ ಮಾಡಿದ್ದಾರೆ.

# ಸಮಾನತೆ, ಭ್ರಾತೃತ್ವದೊಂದಿಗೆ ದೇಶದ ಏಕತೆ ಕಾಪಾಡುವಲ್ಲಿ ಸಂವಿಧಾನದ ಕೊಡುಗೆ ಅಪಾರ : ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ:** ಡಾ.ಬಿ.ಆರ್.ಅಂಬೇಡ್ಕರ್ ಅವರು ಬರೆದ ಸಂವಿಧಾನದಲ್ಲಿ ಎಲ್ಲರಿಗೂ ಸ್ವಾತಂತ್ರ್ಯ, ಸಮಾನತೆ ಕಲ್ಪಿಸಲಾಗಿದ್ದು ಭ್ರಾತೃತ್ವತೆಯೊಂದಿಗೆ ದೇಶದ ಏಕತೆಯನ್ನು ಕಾಪಾಡಿಕೊಂಡು ಹೋಗಬೇಕು ಎಂದು ಸಂಸದರಾದ ಡಾ.ಪ್ರಭ ಮಲ್ಲಿಕಾರ್ಜುನ್ ಹೇಳಿದರು.

ಸೋಮವಾರ (ಸೆ.15) ರಂದು ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆಯಿಂದ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ–ಯ ಅಂಗವಾಗಿ ನನ್ನ ಮತ, ನನ್ನ ಹಕ್ಕು ಎಂಬ ಘೋಷವಾಕ್ಯದೊಂದಿಗೆ ಏರ್ಪಡಿಸಲಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.




10ನೇ ತರಗತಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ದೆಹಲಿಯ ಸಂಸತ್ ಭವನ ವೀಕ್ಷಣೆಗೆ ಅವಕಾಶ ಕಲ್ಪಿಸಿ ಇದರ ಬಗ್ಗೆ ತಿಳಿದುಕೊಳ್ಳುವಂತೆ ಮಾಡಬೇಕು. ಸುಶಿಕ್ಷಿತ ಸಮಾಜ, ಪ್ರಜ್ಞಾವಂತ ಸಮುದಾಯದಿಂದ ಪ್ರಜಾಪ್ರಭುತ್ವ ಇನ್ನಷ್ಟು ಗಟ್ಟಿಯಾಗಲಿದೆ. ಈ ನಿಟ್ಟಿನಲ್ಲಿ ಸಂವಿಧಾನದ ಆಶಯಗಳನ್ನು ಅರಿತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ಕೆಲಸ ನಾವೆಲ್ಲರೂ ಮಾಡಬೇಕಾಗಿದೆ. ಜಗತ್ತಿನಲ್ಲಿ ಅತಿದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ದೇಶ ನಮ್ಮದು. ಸಂವಿಧಾನದಡಿ ಅಹಿಂಸಾತ್ಮಕ ಹಾದಿಯಲ್ಲಿ ಸಾಗುವ ಮೂಲಕ ಏಕತೆಯನ್ನು ಕಾಪಾಡಿಕೊಂಡು ಬರುತ್ತಿದ್ದೇವೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನ ಸಾರ್ವಜನಿಕರ ದನಿ, ದೇಶದ ಭದ್ರಬುನಾದಿಗೆ ದಿವ್ಯಾಸ್ತ್ರ, ನಮ್ಮ ನಿಮ್ಮ ಹಕ್ಕು ಮತ್ತು ಸಂವಿಧಾನಿಕ ಕರ್ತವ್ಯ ಮರೆಯದೆ ಮತ ಚಲಾಯಿಸಿ ಪ್ರತಿಯೊಬ್ಬರ ಮತ ಸಧೃಡ ಭಾರತ ನಿರ್ಮಾಣಕ್ಕೆ ಆಧಾರ. ಯಾವುದೇ ಆಸೆ, ಆಮೀಷಗಳಿಗೆ ಬಲಿಯಾಗದೇ ಪಾರದರ್ಶಕವಾಗಿ ಜನಪ್ರತಿನಿಧಿಗಳನ್ನು ಆಯ್ಕೆಮಾಡುವ ಮೂಲಕ ಪ್ರಜಾಪ್ರಭುತ್ವನ್ನು ಬಲಪಡಿಸಿ ಎಂದರು.

ಶಾಸಕರಾದ ಕೆ.ಎಸ್.ಬಸವಂತಪ್ಪ ಮಾತನಾಡಿ ಸ್ವಾತಂತ್ರ್ಯ, ಸಮಾನತೆ ಮತ್ತು ಉದಾತ್ತ ಚಿಂತನೆಗಳನ್ನು ಸಾರುವ ನಮ್ಮ ಸಂವಿಧಾನಕ್ಕೆ ಅದರದ್ದೇ ಆದಂತಹ ಇತಿಹಾಸವಿದೆ. ಸಂವಿಧಾನವನ್ನು ರಚಿಸಿದ ಡಾ.ಬಿ.ಆರ್.ಅಂಬೇಡ್ಕರ್ ಅವರ ಮಾರ್ಗದರ್ಶನ ಮತ್ತು ಮೇಲ್ವಿಚಾರಣೆಯಲ್ಲಿ ರಚಿತವಾದ ಭಾರತ ಸಂವಿಧಾನಕ್ಕೆ ಒಳಪಟ್ಟು ದೇಶವನ್ನು ಮುನ್ನಡೆಸೋಣ ಎಂದರು. ಇಡೀ ಪ್ರಪಂಚದಲ್ಲಿಯೇ ಅತ್ಯಂತ ದೊಡ್ಡ ಸಂವಿಧಾನವೆಂದರೆ, ಅದು ಭಾರತದ ಸಂವಿಧಾನ. ಮೊದಲು 21 ವರ್ಷದ ನಂತರದಲ್ಲಿ ಮತದಾನ ಹಕ್ಕನ್ನು ನೀಡಲಾಗಿತ್ತು. ರಾಜೀವ್ ಗಾಂಧಿಯವರ ಕಾಲದಲ್ಲಿ 18 ವರ್ಷ ವಯೋಮಾನದವರು ಮತದಾನ ಮಾಡುವ ಪದ್ದತಿಯನ್ನು ಜಾರಿಗೆ ತರಲಾಯಿತು ಎಂದರು.

ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ್ ವಿಠ್ಠಲ್ ರಾವ್ ಮಾತನಾಡಿ ಮಾನವ ಹಕ್ಕುಗಳು, ಸಮಾನತೆ ಮತ್ತು ಸಂಘರ್ಷ, ಪರಿಹಾರಗಳಂತಹ ಜಾಗತಿಕ ಸಮಸ್ಯೆಗಳಿಗೂ ಸಮರ್ಥವಾದ ಪರಿಹಾರ ಪಡೆಯುವುದು ಸಹ ಸಂವಿಧಾನದಲ್ಲಿದೆ. ಈ ದಿನ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಪ್ರತಿಬಿಂಬಿಸಲು ಇರುವ ಸದಾವಕಾಶದ ದಿನವೆಂದೇ ಭಾವಿಸುತ್ತೇವೆ ಎಂದರು.

ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಸಂವಿಧಾನದ ಪೀಠಿಕೆಯನ್ನು ಓದಿ ಪ್ರತಿಜ್ಞಾವಿಧಿ ಬೋಧಿಸಿದರು. ಶಾಸಕರಾದ ಬಿ.ಪಿ ಹರೀಶ್, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಕರ್ನಾಟಕ ರಾಜ್ಯ ತಾಂಡ ಅಭಿವೃದ್ದಿ ನಿಗಮ ನಿಯಮಿತ ಅಧ್ಯಕ್ಷರಾದ ಜಯದೇವನಾಯ್ಕ, ಹೆಚ್ಚುವರಿ ಪೊಲೀಸ್ ಅಧಿಕಾರಿ ಪರಮೇಶ್ವರ ಹೆಗಡೆ, ಆಯುಕ್ತೆ ರೇಣುಕಾ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ, ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮನೆಗಳ ತೆರವು ಮಾಡದಂತೆ ಎಸ್ಎಆರ್ ಬಡಾವಣೆ ನಿವಾಸಿಗಳ ಆಗ್ರಹ

**ದಾವಣಗೆರೆ.ಸೆ.15:** ಇಲ್ಲಿನ ಲೋಕಿಕೆರೆ ರಸ್ತೆಯಲ್ಲಿ ಬರುವ ಕೈಗಾರಿಕ ಪ್ರದೇಶದಲ್ಲಿನ ಎಸ್.ಎ.ರವೀಂದ್ರನಾಥ್ ಬಡಾವಣೆಯಲ್ಲಿ ಕಳೆದ 20 ವರ್ಷಗಳಿಂದ ವಾಸ ಮಾಡುತ್ತಿರುವ 36 ಕುಟುಂಬದ ನಿವಾಸಿಗಳನ್ನು ಯಾವುದೇ ಕಾರಣಕ್ಕೂ ತೆರವು ಮಾಡಬಾರದೆಂದು ದಾವಣಗೆರೆ ಜಿಲ್ಲಾ ಪ್ರಗತಿಪರ ಸಂಘಟನೆಗಳ ಒಕ್ಕೂಟ ಒತ್ತಾಯಿಸಿದೆ.

ಈ ಕುರಿತು ತಹಶೀಲ್ದಾರ್ ಕಚೇರಿಗೆ ಮನವಿ ಸಲ್ಲಿಸಿರುವ ಒಕ್ಕೂಟದ ಪದಾಧಿಕಾರಿಗಳು, ಶಿರಮಗೊಂಡನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಇಲ್ಲಿನ ಎಸ್.ಎ.ರವಿಂದ್ರನಾಥ ನಗರದಲ್ಲಿ 36 ಕುಟುಂಬಗಳಿಗೆ ವಾಸ ಮಾಡಲು ಅವಕಾಶ ನೀಡಬೇಕು. ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ ಹಕ್ಕುಪತ್ರಗಳನ್ನು ನೀಡಬೇಕು. ನ್ಯಾಯಾಲಯದ ಆದೇಶದಂತೆ ನಾವು ತೆರವುಗೊಳಿಸಲು ಸಿದ್ದರಿದ್ದು, ನಮಗೆ ನಿವೇಶನ, ಮನೆ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ತೆರವುಗೊಳಿಸಲು ಮುಂದಾಗಬೇಕು. ನಮಗೆ ಪರ್ಯಾಯ ವ್ಯವಸ್ಥೆ ಆಗುವವರೆಗೂ ಜಿಲ್ಲಾಡಳಿತ ರಕ್ಷಣ ನೀಡಬೇಕು ಎಂದು ಮನವಿ ಮಾಡಿದರು.

ಶಿರಮಗೊಂಡನಹಳ್ಳಿ ಗ್ರಾಮದ ಸರ್ವೆ ನಂಬರಿನ ಜಾಗದಲ್ಲಿ 62ರಲ್ಲಿ 36 ಕುಟುಂಬಗಳು ಕಳೆದ 20 ವರ್ಷಗಳಿಂದ ಎಸ್.ಎ.ರವೀಂದ್ರನಾಥ್ ನಗರದಲ್ಲಿ ವಾಸ ಮಾಡುತ್ತಿದ್ದಾರೆ. ಆದರೆ, ನ್ಯಾಯಾಲಯದ ಆದೇಶವನ್ನಿಟ್ಟುಕೊಂಡು ದಾವಣಗೆರೆ ತಹಶಿಲ್ದಾರರು 36 ಮನೆಗಳನ್ನು ಧ್ವಂಸ ಮಾಡಲು ತುದಿಕಾಲಿನಲ್ಲಿ ನಿಂತಿದ್ದಾರೆ. ಇದು ಸರಿಯಾದ ಕ್ರಮವಲ್ಲ ಎಂದಿದ್ದಾರೆ.

ನಾವುಗಳು ನ್ಯಾಯಾಲಯದ ಆದೇಶವನ್ನು ಗೌರವಿಸುತ್ತೇವೆ. ಆದರೆ, ಯಾವುದೇ ಸೂರಿಲ್ಲದ ನಮಗೆ ಪರ್ಯಾಯವಾಗಿ ಶಾಶ್ವತ ನಿವೇಶನ ಇಲ್ಲವೇ ಮನೆಯನ್ನು ಸರ್ಕಾರ ಒದಗಿಸಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಿ ನಮ್ಮಗಳನ್ನು ತೆರವು ಮಾಡಬೇಕೆಂದು ಆಗ್ರಹಿಸಿದ್ದಾರೆ.

ಇದಲ್ಲದೇ ಅಕ್ಕಪಕ್ಕದಲ್ಲಿ ಮನೆ ಕಟ್ಟಿಕೊಂಡಿರುವ ಕೆಲವರು ನಮ್ಮಗಳನ್ನು ಸ್ಲಂ ಜನ ಎಂದು ಹೇಳುತ್ತಿದ್ದು, ನಾವು ವಾಸ ಮಾಡುತ್ತಿರುವ ಜಾಗವನ್ನು ಖಾಲಿ ಮಾಡುವಂತೆ ಹೇಳುತ್ತಿದ್ದಾರೆ. ನಮ್ಮಗಳಿಗೆ ಮತ್ತ್ಯಾವುದೇ ಆಸ್ತಿಗಳು ಇಲ್ಲದ ಕಾರಣ ಸರ್ಕಾರ ಈ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಬೇಕು. ಜಿಲ್ಲಾಧಿಕಾರಿಗಳು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಮನವಿ ಮಾಡಿದರು.

## ಬೀದರ್: ಆರು ವರ್ಷದ ಮಲ ಮಗಳನ್ನು ಕೊಂದ ಮಹಿಳೆ

**ಬೀದರ್:** ತನ್ನ ಆರು ವರ್ಷದ ಮಲ ಮಗಳನ್ನು ತಾವು ವಾಸಿಸುತ್ತಿದ್ದ ಕಟ್ಟಡದ ಮೂರನೇ ಮಹಡಿಯಿಂದ ತಳ್ಳಿ ಕೊಲೆ ಮಾಡಿದ ಆರೋಪದ ಮೇಲೆ ಮಹಿಳೆಯೊಬ್ಬರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ಆಗಸ್ಟ್ 27 ರಂದು ನಗರದ ಆದರ್ಶ ಕಾಲೋನಿಯಲ್ಲಿ ಈ ಘಟನೆ ನಡೆದಿದೆ ಎಂದು ಅವರು ಹೇಳಿದ್ದಾರೆ.

20 ವರ್ಷದ ಆರೋಪಿ ರಾಧಾ, ತನ್ನ ಮಲ ಮಗಳು ಶಾನ್ವಿಯನ್ನು ಉದ್ದೇಶಪೂರ್ವಕವಾಗಿ ಕಟ್ಟಡದ ಮೂರನೇ ಮಹಡಿಯ ಟೆರೇಸ್‌ನಿಂದ ತಳ್ಳಿ, ಆಕೆಯ ಸಾವು ಆಕಸ್ಮಿಕ ಎಂದು ಹೇಳಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ.

ಬಾಲಕಿಯ ತಂದೆ ಸಿದ್ಧಾಂತ್, ತನ್ನ ಎರಡನೇ ಪತ್ನಿಯ ಹೇಳಿಕೆಯನ್ನು ನಂಬಿ ಆಗಸ್ಟ್ 28 ರಂದು ಗಾಂಧಿ ಗಂಜ್ ಪೊಲೀಸ್ ಠಾಣೆಯಲ್ಲಿ ತನ್ನ ಮಗಳು ಕಟ್ಟಡದ ಮೂರನೇ ಮಹಡಿಯಿಂದ ಜಾರಿ ಬಿದ್ದು ಸಾವನ್ನಪ್ಪಿದ್ದಾಳೆ ಎಂದು ಹೇಳಿದ್ದರು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಯುವಪೀಳಿಗೆ ಪ್ರಜಾಪ್ರಭುತ್ವದ ಮಹತ್ವ ಅರಿಯಬೇಕು: ಎಸ್.ಎಲ್.ಭೋಜೇಗೌಡ

**ಚಿಕ್ಕಮಗಳೂರು,ಸೆ.15:** ಯುವ ಪೀಳಿಗೆ ಪ್ರಜಾಪ್ರಭುತ್ವದ ಮಹತ್ವವನ್ನು ಅರಿಯಬೇಕೆಂಬ ಸದುದ್ದೇಶದಿಂದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್,ಎಲ್ ಭೋಜೇಗೌಡ ಹೇಳಿದರು.

ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಪ್ರವಾಸೋದ್ಯಮ ಇಲಾಖೆ ಹಾಗೂ ನಗರಸಭೆಯ ಸಂಯುಕ್ತ ಆಶ್ರಯದಲ್ಲಿ ಇಂದು ಬೆಳಿಗ್ಗೆ ನಗರದ ನೇತಾಜಿ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ–ಯ ಅಂಗವಾಗಿ ಆಯೋಜಿಸಿದ್ದ ಸೈಕಲ್ ಜಾಥಾಕ್ಕೆ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ ಮತ್ತಿತರ ಅಧಿಕಾರಿಗಳೊಂದಿಗೆ ಚಾಲನೆ ನೀಡಿದ ಬಳಿಕ ಅವರು ಮಾತನಾಡಿದರು.

ದೇಶದ ಏಕತೆ, ಅಖಂಡತೆ, ರಾಷ್ಟ್ರೀಯತೆ ಈ ಎಲ್ಲಾ ವಿಚಾರವನ್ನು ನಮ್ಮ ಸಂವಿಧಾನ ಒಳಗೊಂಡಿದೆ. ಪ್ರಜಾಪ್ರಭುತ್ವದ ಮಹತ್ವವನ್ನು ನಮ್ಮ ಯುವಜನತೆ ಅರಿಯಬೇಕು. ಸಾಮಾಜಿಕ ನ್ಯಾಯ, ಸಮಾನತೆ, ಶಿಕ್ಷಣ ಮತ್ತು ಆರೋಗ್ಯ ಅಂಬೇಡ್ಕರ್ ನೀಡಿರುವ ಸಂವಿಧಾನದ ಆಶಯವಾಗಿದ್ದು, ಈ ಆಶಯದಂತೆ ಪ್ರತಿಯೊಬ್ಬ ಪ್ರಜೆಯು ಅರಿತು ನಡೆದಲ್ಲಿ ಸ್ವಾಸ್ಥ್ಯ ಸಮಾಜ ನಿರ್ಮಾಣವಾಗುತ್ತದೆ ಎಂದು ಹೇಳಿದರು.

ಸಂವಿಧಾನದ ಆಶಯಗಳನ್ನು ಆಧರಿಸಿ ಹಿಂದಿನವರು ಈಗಾಗಲೇ ನಮ್ಮ ನಾಡಿಗೆ ಕೊಟ್ಟಿದ್ದಾರೆ. ಅವೆಲ್ಲವುಗಳನ್ನು ಕೂಡ



ಕಾರ್ಯಗತ ಮಾಡುವಲ್ಲಿ ಯಶಸ್ವಿಯಾಗಿದ್ದೇವೆ. ಇನ್ನು ಕೆಲವು ಯಶಸ್ಸಿನ ಹಾದಿಯಲ್ಲಿವೆ. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಬಿ.ಮಾಲತಿ ಸ್ವಾಗತಿಸಿ, ಮಾತನಾಡಿ ನಮ್ಮದು ವಿಶ್ವದ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ದೇಶ. ಇದಕ್ಕೆ ಮೂಲ ಕಾರಣ ಸಂವಿಧಾನ ಕರ್ತೃ ಡಾ.ಬಿ.ಆರ್.ಅಂಬೇಡ್ಕರ್. ಅವರು ಸಂವಿಧಾನದಲ್ಲಿ ನೀಡಿದ ಅವಕಾಶಗಳಿಂದಾಗಿ ಮಹಿಳೆ ಇಂದು ಹಲವಾರು ಕ್ಷೇತ್ರದಲ್ಲಿ ತಮ್ಮನ್ನು ತಾವು ಗುರುತಿಸಿಕೊಳ್ಳುವಂತಾಗಿದೆ ಎಂದರು.

ಇಂದು ರಾಜ್ಯಾದ್ಯಂತ ಸೈಕಲ್ ಜಾಥವನ್ನು ಆಯೋಜನೆ ಮಾಡಲಾಗಿದೆ. ಭಾರತದ ಭವ್ಯ ಭವಿಷ್ಯ ಶಾಲಾಕಾಲೇಜುಗಳ ಕೊಠಡಿಗಳಲ್ಲಿ ನಿರ್ಮಾಣವಾಗುತ್ತದೆ ಎಂದು ಕೊಠಾರಿ ಆಯೋಗ ಹೇಳಿದ್ದು, ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆ ಬಗ್ಗೆ ಯುವಜನರಲ್ಲಿ ಅರಿವು ಮೂಡಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಪರ ಪೊಲೀಸ್ ವರಿಷ್ಠಾಧಿಕಾರಿ ಸಿ.ಟಿ.ಜಯಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪನಿರ್ದೇಶಕಿ ಮಂಜುಳಾ ಹುಲ್ಲಹಳ್ಳಿ, ಮುಖಂಡರಾದ ಕೆ.ಟಿ ರಾಧಾಕೃಷ್ಣ ಮುಂತಾದವರು ಭಾಗವಹಿಸಿದ್ದರು.

ನೇತಾಜಿ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಿಂದ ಹೊರಟ ಸೈಕಲ್ ರ್‍ಯಾಲಿಯು ಆಜಾದ್ ಪಾರ್ಕ್, ಹಿರೇಮಗಳೂರು, ಎಐಟಿ ಸರ್ಕಲ್, ದಂಟರಮಕ್ಕಿ, ಎಂ.ಜಿ. ರಸ್ತೆ ಮಾರ್ಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಆವರಣಕ್ಕೆ ಬಂದು ತಲುಪಿತು.

## ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸೈಕಲ್ ರ್‍ಯಾಲಿ ಗಿತ್ತೆ ಮಾಧವ ವಿಠ್ಠಲರಾವ್ ಚಾಲನೆ




**ದಾವಣಗೆರೆ:** ಅಂತರಾಷ್ಟ್ರಿಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಸೆಪ್ಟೆಂಬರ್ 15 ರಂದು ನಗರದ ದೃಶ್ಯಕಲಾ ಕಾಲೇಜು ಬಳಿ ಅಯೋಜಿಸಲಾದ ನನ್ನ ಮತ, ನನ್ನ ಹಕ್ಕು ಎನ್ನುವ ಧ್ಯೆಯ ವಾಕ್ಯದೊಂದಿಗೆ ನಡೆದ ಸೈಕಲ್ ಜಾಗೃತಿ ಜಾಥಾಕ್ಕೆ ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲ್ ರಾವ್ ಚಾಲನೆ ನೀಡಿ ಸೈಕಲ್ ರ್‍ಯಾಲಿನಲ್ಲಿ ಭಾಗಿಯಾದರು.

ಗ್ರಾಮೀಣಾಭಿವೃದ್ಧಿ, ಸಮಾಜ ಕಲ್ಯಾಣ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ನಗರಾಭಿವೃದ್ಧಿ ಇಲಾಖೆ. ಹಿಂದುಳಿದ ವರ್ಗಗಳ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ರ್‍ಯಾಲಿಯು ವಿದ್ಯಾನಗರ ವೃತ್ತ ತರಳಬಾಳು ಕಲ್ಯಾಣ ಮಂಟಪ ವೃತ್ತ, ಹದಡಿ ರಸ್ತೆ ವಿದ್ಯಾರ್ಥಿಭವನ ವೃತ್ತ, ಅಂಬೇಡ್ಕರ್ ವೃತ್ತ, ಜಯದೇವ ವೃತ್ತ ಗಾಂಧಿ ವೃತ್ತ, ಮಹಾನಗರ ಪಾಲಿಕೆ ಮುಂಭಾಗ, ಸಂಗೊಳ್ಳಿ ರಾಯಣ್ಣ ವೃತ್ತ, ನಿಜಲಿಂಗಪ್ಪ ಬಡಾವಣೆ ವೃತ್ತ, ಲಕ್ಷ್ಮೀ ಫ್ಲೋರ್ ಮಿಲ್ ವೃತ್ತ, ಗುಂಡಿ ವೃತ್ತ, ಬಾಪೂಜಿ ಆಸ್ಪತ್ರೆ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣವನ್ನು ತಲುಪಿತು.

## ಬಾನು ಮುಷ್ತಾಕ್ ದಸರಾ ಉದ್ಘಾಟನೆ ವಿರೋಧಿಸಿದ್ದ ಪ್ರತಾಪ್ ಸಿಂಹಗೆ ಹೈಕೋರ್ಟ್‌ನಲ್ಲಿ ತೀವ್ರ ಹಿನ್ನಡೆ: ಅರ್ಜಿ ವಜಾ



**ಬೆಂಗಳೂರು:** ವಿಶ್ವವಿಖ್ಯಾತ ಮೈಸೂರು ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ವಿಜೇತ ಲೇಖಕಿ ಬಾನು ಮುಷ್ತಾಕ್ ಅವರಿಗೆ ಆಹ್ವಾನ ನೀಡಿರುವ ಕ್ರಮವನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಸಾರ್ವಜನಿಕ ಹಿತಾಸಕ್ತಿ (ಪಿಐಎಲ್) ಅರ್ಜಿಗಳನ್ನು ಹೈಕೋರ್ಟ್ ವಜಾಗೊಳಿಸಿದೆ. ಇದರಿಂದಾಗಿ ಕಾನೂನು ಸಮರದಲ್ಲಿ ಬಿಜೆಪಿಗೆ ತೀವ್ರ ಹಿನ್ನಡೆಯಾಗಿದೆ.

ಮಾಜಿ ಸಂಸದ ಪ್ರತಾಪ ಸಿಂಹ ಸೇರಿ ಇತರರು ಲೇಖಕಿ ಬಾನು ಮುಷ್ತಾಕ್ ಅವರಿಗೆ ಆಹ್ವಾನ ನೀಡಿರುವುದನ್ನು ವಿರೋಧಿಸಿ ಸಲ್ಲಿಸಿದ್ದ ಪಿಐಎಲ್ ಅರ್ಜಿಗಳ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಖಬ್ರು ಮತ್ತು ನ್ಯಾಯಮೂರ್ತಿ ಸಿ.ಎಂ. ಜೋಷಿ ಅವರಿದ್ದ ವಿಭಾಗೀಯ ಪೀಠ, ವಜಾಗೊಳಿಸಿ ಆದೇಶ ನೀಡಿದೆ.

ದಸರಾ ಉದ್ಘಾಟನೆ ವಿಚಾರದಲ್ಲಿ ಯಾವುದೇ ಹಕ್ಕು ಉಲ್ಲಂಘನೆ ಆಗಿರುವುದು ಕಂಡುಬಂದಿಲ್ಲ, ಹೀಗಾಗಿ ಅರ್ಜಿಯನ್ನು ತಿರಸ್ಕರಿಸಲಾಗಿದೆ ಎಂದು ಪೀಠ ಹೇಳಿದೆ.

ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ ಎರಡು ದಿನಗಳ ಬಳಿಕ ಬೆಂಗಳೂರಿನ ಹೆಚ್.ಎಸ್.ಗೌರವ್, ಉದ್ಯಮಿ ಟಿ.ಗಿರೀಶ್ ಕುಮಾರ್ ಹಾಗೂ ಅಭಿನವ ಭಾರತ್ ಪಾರ್ಟಿಯ ರಾಷ್ಟ್ರೀಯ ಉಪಾಧ್ಯಕ್ಷೆ ಆರ್.ಸೌಮ್ಯ ಅವರು ಪ್ರತ್ಯೇಕವಾಗಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು.

## ಗಣತಿದಾರರು ತಮ್ಮ ಮನೆಗೆ ಬಂದಾಗ ಕುರುಬ ಎಂಬುದಾಗಿ ನಮೂದಿಸಿ



**ಚನ್ನಗಿರಿ :** ಕರ್ನಾಟಕ ರಾಜ್ಯ ಸರಕಾರದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 2025 ನ್ನು ಸೆಪ್ಟಂಬರ್ 25 ರಂದು ಕರ್ನಾಟಕ ರಾಜ್ಯದಾದ್ಯಂತ ಹಮ್ಮಿಕೊಂಡಿದ್ದು ಗಣ–ತಿದಾರರು ತಮ್ಮ ಮನೆಗೆ ಬಂದಾಗ ಸಮಾಜದ ಬಂಧುಗಳು ಸರಕಾರದಿಂದ ಸಾಮಾಜಿಕ,ಶಿಕ್ಷಣ, ಮತ್ತು ಉದ್ಯೋಗ ಇತ್ಯಾದಿ ಮೀಸಲಾತಿಗಳನ್ನು ಪಡೆಯುವ ಉದ್ದೇಶದಿಂದ ನಮ್ಮ ಸಮಾಜದ ಬಂಧುಗಳು ಜಾತಿ ಕಾಲಂ ನಂ 9 ರಲ್ಲಿ ಸರಕಾರದ ಗೆಜೆಟ್ ನಂ ನಲ್ಲಿ ಕುರುಬ ಎಂಬುದಾಗಿ ಕಡ್ಡಾಯವಾಗಿ ನಮೂದಿಸಬೇಕು ಎಂದು ಚನ್ನಗಿರಿ ತಾಲೂಕು ಕುರುಬ ಸಮಾಜದ ಅಧ್ಯಕ್ಷ ಬೆಳಗೆರೆ ಶಿವಣ್ಣ ಮನವಿ ಮಾಡಿದರು.

ಸೋಮವಾರ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಸಮಾಜದ ಬಂಧುಗಳು ಉಪಜಾತಿ ಕಾಲಂನಲ್ಲಿಯೂ ಸಹ ಕುರುಬ ಎಂದು ಜಾತಿಯನ್ನು ನಮೂದಿಸಬೇಕು. ಇನ್ನಿತರ ಯಾವುದೇ ಪರ್ಯಾಯ ಜಾತಿಗಳ ಪದನಾಮಗಳನ್ನು ಬರೆಯಿಸಬಾರದು. ಪ್ರತಿಯೊಂದು ಕುಟುಂಬದವರ ಕರ್ನಾಟಕ ಪ್ರದೇಶ ಕುರುಬರ ಸಂಘದ ಪದಾಧಿಕಾರಿಗಳು, ನಿರ್ದೇಶಕರುಗಳು, ಜಿಲ್ಲಾ ಸಂಘದ ಅಧ್ಯಕ್ಷರು. ಪದಾಧಿಕಾರಿಗಳು,ಜಿ.ಪಂ. ತಾ.ಪಂ. ಸದಸ್ಯರು ಸಮಾಜದ ವಿದ್ಯಾರ್ಥಿಗಳು ಕಡ್ಡಾಯವಾಗಿ ಸಮೀಕ್ಷೆಯಲ್ಲಿ ಬಾಗವಹಿಸಿ ತಮ್ಮ ಕುಟುಂಬಗಳ ವಿವರವನ್ನು ಸಮೀಕ್ಷೆದಾರರಿಗೆ ನೀಡಿ ಎಂದು ಮನವಿ ಮಾಡಿದರು.

ತಾಲೂಕು ಕುರುಬ ಸಮಾಜದ ಉಪಾಧ್ಯಕ್ಷ ಸಂತೆಬೆನ್ನೂರು ಬಸವರಾಜ್ ಮಾತನಾಡಿ ಸಮಾಜದ ಬಂದುಗಳು ಕಾಲಂಗಳಲ್ಲಿ ಕುರುಬ ಎಂದು ಮಾತ್ರ ನಮೂದಿಸಬೇಕು. ಧರ್ಮ ಎಂಬ ಕಾಲಂನಲ್ಲಿ ಹಿಂದೂ ಎಂದು ನಮೂದಿಸಬೇಕು. 150 ಸಮೀಕ್ಷೆಗಳ ತಂಡ ಬರಲಿದ್ದು ಒಂದೇ ಜಾತಿ ಕುರುಬ ಎಂದು ಮಾತ್ರ ಹೇಳಬೇಕು. ಚನ್ನಗಿರಿ ವಿಧಾನಸಭಾ ಕ್ಷೇತ್ರದಲ್ಲಿ 40 ಗ್ರಾಮಗಳಲ್ಲಿ ಕುರುಬ ಸಮಾಜದ ಬಾಂದವರು ಇದ್ದು ತಾಲೂಕಿನಲ್ಲಿ ಸುಮಾರು 20.000 ಜನರು ಇದ್ದಾರೆ. ಕುರುಬ ಸಮಾಜವನ್ನು ಎಸ್.ಟಿ. ಮೀಸಲಾತಿ ನೀಡುವಂತೆ ಶ್ರೀಗಳ ನೇತ್ರತ್ವದಲ್ಲಿ ನಿರಂತರ ಹೋರಾಟವನ್ನು ನಡೆಸುತ್ತಿದ್ದು ಮುಂದಿನ ದಿನಗಳಲ್ಲಿ ಅವಕಾಶ ದೊರಕುವ ನೀರೀಕ್ಷೆ ಇದೆ ಎಂದರು. ಈ ಸಂದರ್ಭದಲ್ಲಿ ಚನ್ನಗಿರಿ ಕುರುಬ ಸಮಾಜದ ಅಧ್ಯಕ್ಷ ಕೆ,ಆರ್.ಗೋಪಿ, ತಾಲೂಕು ಕುರುಬ ಸಮಾಜದ ಕಾರ್ಯದರ್ಶಿ ಎ.ಸಿ.ಚಂದ್ರು, ಖಜಾಂಚಿ ರಾಜು ಕರಡೇರ್, ವಡ್ನಾಳ್ ತಿಪ್ಪೇಶ್ ಇತರರು ಹಾಜರಿದ್ದರು.

# ಗ್ರಾಮಗಳು, ಬಡಾವಣೆಗೆ ಕೂಡುವ ರಸ್ತೆ ಅಭಿವೃದ್ಧಿಗೆ ಆಗ್ರಹಿಸಿ ಪ್ರತಿಭಟನೆ

**ದಾವಣಗೆರೆ:** ತಾಲೂಕಿನ ಮಲ್ಲಶೆಟ್ಟನಹಳ್ಳಿ ಗ್ರಾಮ ನಕ್ಷೆ ಪ್ರಕಾರ ಬಡಾವಣೆಗೆ ಹೋಗಲು ಇರುವ ರಸ್ತೆ ಕೆಲವರಿಂದ ಒತ್ತುವರಿ ಆಗಿದ್ದು, ರಸ್ತೆ ತೆರವುಗೊಳಿಸುವಂತೆ ಹೈಕೋರ್ಟ್ ನಿರ್ದೇಶನ ನೀಡಿದ್ದರೂ ಸಹ ಕ್ರಮ ಕೈಗೊಳ್ಳದ ಕಾರಣ ಸಾರ್ವಜನಿಕರಿಗೆ ತೊಂದರೆ ಆಗುತ್ತಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಶ್ರಮಜೀವಿ ಕಾಂಮ್ರೆಡ್ ಪಂಪಾಪತಿ ಕಟ್ಟಡ ಕಾರ್ಮಿಕರ ಬಡಾವಣೆ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ ಮತ್ತು ಕರ್ನಾಟಕ ರಾಜ್ಯ ರೈತ ಸಂಘದಿಂದ ಸೋಮವಾರ ನಗರದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು. ಈ ವೇಳೆ ಜಿಲ್ಲಾಡಳಿತಕ್ಕೆ ಆಗಮಿಸಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪರಿಗೂ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಕಾರ್ಮಿಕ ಮುಖಂಡ ಆವರಗೆರೆ ಹೆಚ್.ಜಿ.ಉಮೇಶ್,




ತಾಲೂಕಿನ ಆನಗೋಡು ಹೋಬಳಿಯ ಮಲ್ಲಶೆಟ್ಟಿಹಳ್ಳಿ ಗ್ರಾಮಪಂಚಾಯತಿ ವ್ಯಾಪ್ತಿಗೆ ಬರುವ ಶ್ರಮಜೀವಿ ಕಾಂ ಪಂಪಾಪತಿ ಕಟ್ಟಡ ಕಾರ್ಮಿಕರ ಬಡಾವಣೆಗೆ ಮತ್ತು ಕರಿಲಕ್ಕೇನಹಳ್ಳಿ, ತೋಗಲೇರಿ, ಕುರ್ಕಿ ಗ್ರಾಮಕ್ಕೆ ಕೂಡುವ ರಸ್ತೆವರೆಗೂ ರಸ್ತೆಯನ್ನು ಅಭಿವೃದ್ಧಿ ಪಡಿಸುವಂತೆ ಇಲ್ಲಿನ ನಿವೇಶನದಾರರು ಹೈಕೋರ್ಟ್ ಮೊರೆ ಹೋಗಿದ್ದರು. ದೂರು ದಾಖಲಿಸಿಕೊಂಡ ನ್ಯಾಯಾಲಯವು ದಾಖಲೆಗಳನ್ನು ಪರಶೀಲಿಸಿ ಸೇವಾ ರಸ್ತೆಗೆ ಲಗತ್ತಾಗಿರುವ ಕೆಲವು ಜಮೀನುದಾರರು ರಸ್ತೆಯನ್ನು ಒತ್ತುವರಿ ಮಾಡಿದ್ದು, ಅದನ್ನು ತೆರವು ಮಾಡುವಂತೆ ಆಗ್ರಹಿಸಿ ಹಲವಾರು ಬಾರಿ ನೋಟಿಸ್ ನೀಡಿದ್ದರೂ ಸಹ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಈ ನಿಟ್ಟಿನಲ್ಲಿ ಹೈಕೋರ್ಟ್ ದಾರಿ ಬಿಟ್ಟುಕೊಡುವಂತೆ ಆದೇಶ ನೀಡಿದೆ. ಆದರೂ ಈವರೆಗೂ ನ್ಯಾಯಾಲಯದ ಆದೇಶ ಪಾಲನೆ ಆಗಿಲ್ಲ ಎಂದರು.

ಇದಲ್ಲದೇ ದಾವಣಗೆರೆ ತಹಶೀಲ್ದಾರರು ರಸ್ತೆ ಬಿಡಿಸಿರುವ ಬಗ್ಗೆ ಕೆಲವು ಫೋಟೋಗಳು ಮತ್ತು ವಿಡಿಯೋಗಳಲ್ಲದೇ ರಸ್ತೆ ಮಾಡಿರುವ ಬಗ್ಗೆ ಹೇಳಿಕೆಯನ್ನು ಸಹ ನ್ಯಾಯಾಲಯಕ್ಕೆ ನಕಲಿ ದಾಖಲೆಗಳನ್ನು ಸಲ್ಲಿಸಿದ್ದು, ರಸ್ತೆ ಅಭಿವೃದ್ಧಿ ಮಾಡಿದ್ದೇವೆಂದು ನ್ಯಾಯಾಲಯಕ್ಕೆ ದಾಖಲೆ ನೀಡಿ–ದ್ದಾರೆ. ಇಲ್ಲಿ ಯಾವುದೇ ಅಭಿವೃದ್ಧಿ ಮಾಡದೇ ನ್ಯಾಯಾಲಯದ ದಿಕ್ಕು ತಪ್ಪಿಸಿದ್ದಾರೆ. ಕಾರಣ ಈ ಕೂಡಲೇ ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ನ್ಯಾಯಾಲಯದ ಆದೇಶದ ಪಾಲನೆ ಜತೆ ರಸ್ತೆಯನ್ನು ತೆರವು ಮಾಡಿಸಿಕೊಡಬೇಕೆಂದರು.

ರಸ್ತೆ ಅಭಿವೃದ್ಧಿಗೆಂದೆ ಜಿಲ್ಲಾ ಪಂಚಾಯತಿಯಿಂದ 65ಲಕ್ಷ ರೂ. ಗಳು ಬಿಡುಗಡೆಯಾಗಿದ್ದರೂ ಸಹ ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಆಗುವಂತೆ ಸಂಬಂಧಿಸಿದ ಅಧಿಕಾರಿಗಳು ರಸ್ತೆ ನಿರ್ಮಾಣ ಮಾಡಿರುವುದಿಲ್ಲ. ಅಧಿಕಾರಿಗಳು ರಸ್ತೆ ಮಾಡಲು ಮೀನಾಮೇಷ ಎಣಿಸುತ್ತಿದ್ದು, ಇದರಿಂದ ಬಹಳಷ್ಟು ರೈತರಿಗೆ, ಸಾರ್ವಜನಿಕರಿಗೆ ಮತ್ತು ಶ್ರಮಜೀವಿ ಕಾಂ.ಪಂಪಾಪತಿ ಕಟ್ಟಡ ಕಾರ್ಮಿಕರ ಬಡಾವಣೆ ನಿವೇಶನದಾರರಿಗೆ ಮನೆ ಕಟ್ಟಲು, ಸಾಮಗ್ರಿಗಳನ್ನು ಸರಬರಾಜು ಮಾಡಲು ಮಾತ್ರವಲ್ಲದೇ ಸುತ್ತಮುತ್ತಲಿನ ರೈತರಿಗೂ, ಸಣ್ಣಪುಟ್ಟ ಕೈಗಾರಿಕೆಯವರಿಗೆ ತೊಂದರೆಯಾಗುತ್ತಿದೆ ಎಂದು ವಿವರಿಸಿದರು.

ಆದ್ದರಿಂದ ಜಿಲ್ಲಾಧಿಕಾರಿಗಳು ಈ ಕೂಡಲೇ ರಾಜ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ರಸ್ತೆ ಒತ್ತುವರಿ ತೆರವು ಮಾಡಿ, ಜಿಪಂನ ಅನುದಾನವನ್ನು ಬಳಸಿಕೊಂಡು ಕನಿಷ್ಠ ನಾಲ್ಕು ಚಕ್ರದ ವಾಹನಗಳು ಓಡಾಡಲು ಬೇಕಾದಷ್ಟು ರಸ್ತೆಯನ್ನು ಮಾಡಿಕೊಡಬೇಕು. ಜತೆಗೆ ಒತ್ತುವರಿ ಮಾಡಿಕೊಂಡಿರುವ ರುದ್ರಭೂಮಿ ಜಾಗವನ್ನು ತೆರವು ಮಾಡಬೇಕೆಂದು ಒತ್ತಾಯಿಸಿದರು.

ಈ ವೇಳೆ ಶ್ರಮಜೀವಿ ಕಾಂಮ್ರೆಡ್ ಪಂಪಾಪತಿ ಕಟ್ಟಡ ಕಾರ್ಮಿಕರ ಬಡಾವಣೆ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ ಮತ್ತು ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳಾದ ಶಿವಕುಮಾರ್ ಡಿ.ಶೆಟ್ಟರ್, ಸತೀಶ್ ಅರವಿಂದ್, ವಿ.ಲಕ್ಷ್ಮಣ್, ಸುರೇಶ್ ಯರಗಂಟೆ, ಗಿರೀಶ್, ಹೆಚ್.ಎನ್.ಮಂಜುನಾಥ್, ಮಂಜುಳಾ, ಹನುಮೇಶ್, ನಾಗರಾಜ್, ಶಿವಕುಮಾರ್, ಲಕ್ಷ್ಮಮ್ಮ ಸೇರಿದಂತೆ ಇತರರು ಇದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ ಮತ್ತು ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ನಿಮ್ಮ ಹೂಡಿಕೆಗಳು ಬಗ್ಗೆ ನಿಮ್ಮ ಭವಿಷ್ಯದ ಗುರಿಗಳ ಬಗ್ಗೆ ರಹಸ್ಯಮಯವಾಗಿರಿ. ದಿನದ ಕೊನೆಯಲ್ಲಿ ಒಬ್ಬ ಹಳೆಯ ಸ್ನೇಹಿತರ ಭೇಟಿ ನಿಮ್ಮ ಸಂಜೆಯನ್ನು ಬೆಳಗಿಸುತ್ತದೆ. ನೀವು ಆ ಸುವರ್ಣ ದಿನಗಳನ್ನು ನೆನಪಿಸಿಕೊಳ್ಳುವ ಜೊತೆ ನಿಮ್ಮ ಬಾಲ್ಯದ ಸವಿನೆನಪುಗಳನ್ನೂ ಆನಂದಿಸುತ್ತೀರಿ.

### ವೃಷಭ ರಾಶಿ

ನೀವು ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ವಿಶೇಷವಾಗಿ ಪರಿಗಣಿಸಿ. ನೀವು ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು.

### ಮಿಥುನ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಡೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ. ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಹಾಯ ಕೇಳುವ ಒಬ್ಬ ವಯಸ್ಸಾದ ಹಿರಿಯರಿಂದ ಆಶೀರ್ವಾದ. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ. ಕೆಲಸದ ಬದಲಾವಣೆ ನಿಮಗೆ ಮಾನಸಿಕ ತೃಪ್ತಿ ನೀಡುತ್ತದೆ.

### ಕರ್ಕ ರಾಶಿ

ಅನಂತ ಚೇತನ್ಯ ಮತ್ತು ಉತ್ಸಾಹ ನಿಮ್ಮನ್ನು ಆವರಿಸುತ್ತದೆ ಮತ್ತು ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಹಠಾತ್ ಪ್ರಣಯ ಪ್ರಸಂಗಗಳು ನಿಮ್ಮನ್ನು ಗೊಂದಲಕ್ಕಿಡು ಮಾಡಬಹುದು.

### ಸಿಂಹ ರಾಶಿ

ಜನರನ್ನು ನಿಮ್ಮಿಷ್ಟದಂತೆ ನಡೆದುಕೊಳ್ಳುವಂತೆ ಒತ್ತಾಯಿಸಬೇಡಿ. ಇತರರ ಬಯಕೆ ಮತ್ತು ಆಸಕ್ತಿಯ ಬಗ್ಗೆ ಯೋಚಿಸಿದಲ್ಲಿ ನಿಮಗೆ ಅನಿಯಮಿತ ಸಂತೋಷ ಬರುತ್ತದೆ. ಭವಿಷ್ಯದಲ್ಲಿ ನೀವು ಆರ್ಥಿಕವಾಗಿ ಬಲವಾಗಿರಬೇಕೆಂದು ಬಯಸಿದರೆ ಇಂದಿನಿಂದಲೇ ಹಣವನ್ನು ಉಳಿಸಿ. ನಿಮ್ಮ ಸಹೋದರನಿಗೆ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಸಹಾಯ ಮಾಡಿ. ವ್ಯಾಜ್ಯಗಳನ್ನು ಅನಗತ್ಯವಾಗಿ ಹೆಚ್ಚಿಸದೇ ಅವುಗಳನ್ನು ಸೌಹಾರ್ದತೆಯಿಂದ ಪರಿಹರಿಸಲು ಪ್ರಯತ್ನಿಸಿ.

### ಕನ್ಯಾ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ನಿಮ್ಮ ಸಂಗಾತಿಯ ಪ್ರೀತಿ ನಿಜವಾಗಿಯೂ ಭಾವಪೂರ್ಣವಾಗಿದೆ ಎಂದು ಇಂದು ನೀವು ತಿಳಿದುಕೊಳ್ಳುತ್ತೀರಿ.

### ತುಲಾ ರಾಶಿ

ನೀವು ಮನಸ್ಸಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ, ಜಾಣತನ ಮತ್ತು ಸಭ್ಯತೆಯನ್ನು ಬಳಸಬೇಕಾಗುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

### ವೃಶ್ಚಿಕ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು. ನೀವು ಎಲ್ಲರ ಬೇಡಿಕೆಗಳನ್ನೂ ಪೂರೈಸಲು ಪ್ರಯತ್ನಿಸಿದಲ್ಲಿ ವಿವಿಧ ದಿಕ್ಕುಗಳಲ್ಲಿ ಹರಿದು ಹೋಗುತ್ತೀರಿ. ಧಾರ್ಮಿಕ ಮತ್ತು ಶುದ್ಧ ಪ್ರೀತಿಯನ್ನು ಅನುಭವಿಸಿ.

### ಧನು ರಾಶಿ

ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ. ದುಷ್ಟತೆಯು ಒಳಿತಿಗಿಂತ ಬೇಗ ವಿಜಯ ಸಾಧಿಸುತ್ತದೆಂದು ನೆನಪಿಡಿ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಸ್ನೇಹಿತರೊಂದಿಗಿನ ಸಂಜೆ ಆನಂದ ಹಾಗೂ ಕೆಲವು ರಜಾ ಯೋಜನೆಗಳಿಗೆ ಉತ್ತಮವಾಗಿರುತ್ತದೆ.

### ಮಕರ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ ಇವು ನಿಮ್ಮ ಮನಸ್ಸಿನ ಮೇಲೆ ಒತ್ತಡ ತರುತ್ತವೆ.

### ಕುಂಭ ರಾಶಿ

ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು ನೀವು ನಂಬಿ ಅಥವಾ ಬಿಡಿ ನಿಮ್ಮ ಬಳಿಯಿರುವ ಯಾರಾದರೂ ನಿಮ್ಮನ್ನು ಅತ್ಯಂತ ನಿಕಟವಾಗಿ ಗಮನಿಸುತ್ತಿದ್ದಾರೆ.

### ಮೀನ ರಾಶಿ

ನಿಮ್ಮ ಹಾಸ್ಯಪ್ರಜ್ಞೆ ಇನ್ನೊಬ್ಬರಿಗೆ ಸಂತೋಷ ವಸ್ತುಗಳನ್ನು ಹೊಂದುವುದರಲ್ಲದೇ ನಮ್ಮೊಳಗೇ ಇದೆಯೆಂದು ಅರ್ಥ ಮಾಡಿಸುವುದರಿಂದ ಅವರು ಸ್ವತಃ ಈ ಕೌಶಲ್ಯವನ್ನು ಹೊಂದಲು ಪ್ರೋತ್ಸಾಹಿಸಿದಂತಾಗುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

# ಡಾ. ಅಪ್ಪಣ್ಣ ಹಂಜೆ ಅವರಿಗೆ 'ಈಶ್ವರಜ್ಞಾನ ಗುರುರತ್ನ' ಪ್ರಶಸ್ತಿ



**ಗದಗ :** ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ.) ಗದಗ ಗ್ರಾಮೀಣ ವಿಭಾಗ ಮತ್ತು ಹುಲಕೋಟಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ 2025-26ನೇ ಸಾಲಿನ 'ಶಿಕ್ಷಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ'ದಲ್ಲಿ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥ ಮತ್ತು ಪ್ರಾಧ್ಯಾಪಕ ಹಾಗೂ ಎನ್.ಎಸ್.ಎಸ್. ಘಟಕದ ಸಂಯೋಜಕ ಡಾ. ಅಪ್ಪಣ್ಣ ಹಂಜೆ ಅವರನ್ನು 'ಈಶ್ವರಜ್ಞಾನ ಗುರುರತ್ನ' ಪ್ರಶಸ್ತಿಯಿಂದ ಗೌರವಿಸಿವೆ. ಶ್ರೀಯುತರು 20 ವರ್ಷಗಳ ಬೋಧನಾ ಅನುಭವ ಹೊಂದಿದ್ದು, ಪ್ರಾಚೀನ ಸಮಾಜ, ಧರ್ಮ, ಇತಿಹಾಸ, ಸಂಸ್ಕೃತಿ, ವಾಸ್ತುಕಲೆ, ಶಿಲ್ಪಕಲೆ, ಶಾಸನಗಳು, ಸಾಹಿತ್ಯ ಮುಂತಾದ ಕ್ಷೇತ್ರಗಳಲ್ಲಿ ಸಂಶೋಧನ ಅಧ್ಯಯನ ಕೈಗೊಂಡು 12ಕ್ಕೂ ಹೆಚ್ಚು ಕೃತಿಗಳು, 150ಕ್ಕೂ ಹೆಚ್ಚು ಸಂಶೋಧನ ಲೇಖನಗಳನ್ನು ಪ್ರಕಟಿಸಿದ್ದಾರೆ. ಬೀದರ ಜಿಲ್ಲೆಯ ಜೈನ ಶಾಸನಗಳು, ಲಕ್ಕುಂಡಿಯ ಬಸದಿಗಳು, ಅಣ್ಣಿಗೇರಿಯ ಜೈನ ದೇಸಗತಿ ಮನೆತನ, ಬೆಳಗಾವಿಯ ಕಮಲ ಬಸದಿ, ಕರ್ನಾಟಕದ ಬಸದಿಗಳು, ಶಾಸನ ಸಾಹಿತ್ಯದಲ್ಲಿ ಜೀವನ ಮೌಲ್ಯ ಕೃತಿಗಳು ವಸ್ತುನಿಷ್ಠ ಸಂಶೋಧನ ಅಧ್ಯಯನ ಗೌರವಕ್ಕೆ ಪಾತ್ರವಾಗಿವೆ.

ಡಾ. ಅಪ್ಪಣ್ಣ ಅವರು ಗದಗ ಜಿಲ್ಲೆಯ ದೇಸಗತಿ ಮನೆತನಗಳು, ದಾಖಲೆ ಪತ್ರಗಳ ಶೋಧನೆ ಮತ್ತು ಸಂರಕ್ಷಣೆ, ಕರ್ನಾಟಕ ಏಕೀಕರಣ ಚಳುವಳಿ ಹಾಗೂ ಐತಿಹಾಸಿಕ ದಾಖಲೆಗಳು ಮತ್ತು ಛಾಯಾಚಿತ್ರಗಳ ಪ್ರದರ್ಶನ ಸೇರಿದಂತೆ ಹಲವು ವಿಚಾರ ಸಂಕಿರಣ ಮತ್ತು ಕಾರ್ಯಾಗಾರಗಳನ್ನು ಏರ್ಪಡಿಸಿದ್ದು, ಕೆಲವು ಸಂಸ್ಮರಣ ಕೃತಿಗಳು, ನಿಯತಕಾಲಿಕೆಗಳು, ಪತ್ರಿಕೆಗಳ ಸಂಪಾದಕ ಮಂಡಳಿ ಸದಸ್ಯರಾಗಿ, ಕರ್ನಾಟಕ ಪುರಾತತ್ವ ಮತ್ತು ಸಾಹಿತ್ಯ ಪರಿಷತ್ತು, ಗದಗ ಜಿಲ್ಲಾ ದಿಗಂಬರ ಜೈನ ಸಂಘ, ಹಂಪಿ ಕನ್ನಡ ವಿಶ್ವವಿದ್ಯಾಲಯದ ಜೈನ ಸಾಹಿತ್ಯ ಸಂಸ್ಕೃತಿ ಅಧ್ಯಯನ ಕೇಂದ್ರಗಳ ಸಲಹಾ ಸಮಿತಿ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಹಂಪಿ ಕನ್ನಡ ವಿಶ್ವವಿದ್ಯಾಲಯದ ಚರಿತ್ರೆ ವಿಭಾಗದ ಮಾನ್ಯತಾ ಕೇಂದ್ರ ಉಜಿರೆಯ ಎಸ್.ಡಿ.ಎಂ. ಕಾಲೇಜಿನ ಹಾಮಾನಾ ಸಂಶೋಧನ ಕೇಂದ್ರದಲ್ಲಿ ಪಿಎಚ್.ಡಿ. ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರಾಗಿದ್ದಾರೆ. ಶ್ರೀಯುತರು ಸಂಶೋಧನೆ, ಅಧ್ಯಯನ, ಪ್ರಕಟಣೆ ಕ್ಷೇತ್ರಗಳಲ್ಲಿ ಕೈಗೊಳ್ಳುತ್ತಿರುವ ಸಾಧನೆ, ಕೊಡುಗೆಗಳಿಗೆ ನಾಡಿನ ಹಲವು ಸಂಘ-ಸಂಸ್ಥೆಗಳಿಂದ ಶ್ರೀ ಹುಯಿಲಗೋಳ ನಾರಾಯಣರಾವ ಸ್ಮಾರಕ ಪ್ರಶಸ್ತಿ, ಸ್ವಸ್ತಿಶ್ರೀ ದೇವೇಂದ್ರಕೀರ್ತಿ ದತ್ತಿ ಪ್ರಶಸ್ತಿ, ಆಚಾರ್ಯ 108 ಶ್ರೀ ಬಾಹುಬಲಿ ಕನ್ನಡ ಸಾಹಿತ್ಯ ಪ್ರಶಸ್ತಿ, ಶ್ರೀಮತಿ ಜಯಲಕ್ಷ್ಮಮ್ಮ ಬಿ.ಎಸ್. ಸಣ್ಣಯ್ಯ ದತ್ತಿ ಪ್ರಶಸ್ತಿ, ಆದರ್ಶ ಜೈನ ಯುವ ಪ್ರಶಸ್ತಿ, ಜ್ಞಾನಶ್ರೀ ಪ್ರಶಸ್ತಿ, ಬಾಹುಬಲಿ ಸಿದ್ಧಶ್ರೀ ಪ್ರಶಸ್ತಿ, ಜ್ಞಾನೇಶ್ವರ ಆದರ್ಶ ಶಿಕ್ಷಕ ಪ್ರಶಸ್ತಿ, ಬೆಳ್ಳಿ ಸಂಭ್ರಮ ಪ್ರಶಸ್ತಿ, ಸಾಹಿತ್ಯ ಸಿರಿ ಪ್ರಶಸ್ತಿಗಳ ಗೌರವಕ್ಕೆ ಪಾತ್ರರಾಗಿದ್ದಾರೆ. ಶ್ರೀಯುತರನ್ನು ಕಾಲೇಜಿನ ಅಭಿವೃದ್ಧಿ ಸಮಿತಿಯ ಅಧ್ಯಕ್ಷರು, ಸದಸ್ಯರು, ಪ್ರಾಂಶುಪಾಲರು, ಬೋಧಕ-ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು, ಗದಗ ಜಿಲ್ಲಾ ದಿಗಂಬರ ಜೈನ ಸಂಘದ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

## ನಿಧನ ಸುದ್ಧಿಗಳು

### ಕ್ಯಾರಕಟ್ಟೆ ಬಿ. ವಾಮದೇವಪ್ಪ ನಿಧನ

**ಹರಿಹರ :** ತಾಲ್ಲೂಕು ಹನಗವಾಡಿ ಗ್ರಾಮದ ವಾಸಿ ಕ್ಯಾರಕಟ್ಟೆ ಬಿ. ವಾಮದೇವಪ್ಪ (70) ಇವರು ದಿನಾಂಕ: 14.09.2025ರ ಭಾನುವಾರ ಸಂಜೆ 15.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ: 15.09.20250 ಮಧ್ಯಾಹ್ನ 1.30ಕ್ಕೆ ಸ್ವಗ್ರಾಮ ಹನಗವಾಡಿಯಲ್ಲಿ ನೆರವೇರಿದೆ.

## ಹಿರಿಯ ನಾಗರೀಕರಿಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆ

**ಶಿವಮೊಗ್ಗ:** ವಿಕಲಚೇತನ ಹಾಗು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಸೆ. 15 ರಂದು ನಗರದ ನೆಹರು ಕ್ರೀಡಾಂಗಣದಲ್ಲಿ ಹಿರಿಯ ನಾಗರಿಕರಿಗಾಗಿ ನಡೆಯುವ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಶಿವಮೊಗ್ಗ ಜಿಲ್ಲಾ ಸರ್ಕಾರಿ ನಿವೃತ್ತ ನೌಕರರು ಭಾಗವಹಿಸುವಂತೆ ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಸ್.ಆರ್. ಚಂದ್ರಪ್ಪ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಕ್ರೀಡೆಗಳಲ್ಲಿ ಮ್ಯುಸಿಕಲ್ ಚೇರ್, ಬಿರುಸಿನ ನಡಿಗೆ, ಬಕೆಟ್‌ನಲ್ಲಿ ಬಾಲ್ ಎಸೆಯುವ ಸ್ಪರ್ಧೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಗಾಯನ ಸ್ಪರ್ಧೆ ಮತ್ತು ಏಕಪಾತ್ರಾಭಿನಯ ಸ್ಪರ್ಧೆ ಏರ್ಪಡಿಸಿದೆ. ಸ್ತ್ರೀಯರಿಗೆ ಹಾಗೂ ಪುರುಷರಿಗೆ ಪ್ರತ್ಯೇಕವಾಗಿದ್ದು, ವಯೋಮಿತಿ ಆಧಾರದ ಮೇಲೆ 60 ರಿಂದ 69 ಹಾಗೂ 70 ವರ್ಷ ಮೇಲ್ಪಟ್ಟವರಿಗಾಗಿ ಎರಡು ವಿಭಾಗಗಳನ್ನು ಏರ್ಪಡಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ಪುರುಷರ ವಿಭಾಗದಿಂದ 60-69ರ ವಯೋಮಿತಿಯ ಬಿರುಸಿನ ನಡಿಗೆಯಲ್ಲಿ ಪ್ರಥಮ ಸ್ಥಾನ ಪಡೆದ ಹಾಗೂ ಗಾಯನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ 60-69ರ ವಯೋಮಿತಿಯ ಮಹಿಳೆಯರನ್ನು ರಾಜ್ಯಮಟ್ಟದ ಸ್ಪರ್ಧೆಗೆ ಕಳುಹಿಸಲಾಗುವುದು.

# ಅಜ್ಞಾನದ ಅಂಧಾನುಕರಣೆಗೆ ಜ್ಞಾನ ಬೆಳೆಯುತ್ತಿರುವುದು ಶ್ರೀ ಬಸವಣ್ಣನವರ ಈ ಅಪರೂಪದ ಕವಿ ಗೋಷ್ಠಿ

**ದಾವಣಗೆರೆ:** ದಾವಣಗೆರೆ ಜಿಲ್ಲೆಗೆ ಸಾಂಸ್ಕೃತಿಕ ಕೊಡುಗೆಯಾಗಿರುವ ಕಲಾಕುಂಚ ಸಂಸ್ಥೆ ಅದರ ರುವಾರಿಗಳಾದ ಸಾಲಿಗ್ರಾಮ ಗಣೇಶ ಶೆಣೈ ಅವರು ವೈದಿಕ ಪರಂಪರೆಯಲ್ಲೇ ಹುಟ್ಟಿ ಬೆಳೆದು ಬಂದಿದ್ದರೂ ಬಸವಣ್ಣನವರ ವೈಚಾರಿಕತೆಯ ನಡೆನುಡಿಯ ಆದರ್ಶ ಪಾಲಿಸುತ್ತಾ ಜಾತಿ ಭೇದ, ಲಿಂಗ ತಾರತಮ್ಯ ಹೆಣ್ಣಿನ ಶೋಷಣೆ ಸಂಬಂಧಿತ ಯಾವುದೇ ಮೌಢ್ಯತೆಗಳನ್ನು ನಂಬದೆ ಇಂತಹ ಮಾನವತಾ ಧರ್ಮದ ಕಾಯಕಗಳನ್ನು ಮಾಡುತ್ತಾ ಅನುಪಾಲನಾ ಆಚಾರವಾಗಿ ನಿತ್ಯ ಜೀವನದ ನಡೆಯಲ್ಲಿ ಪಾಲಿಸುತ್ತಾ ಬಂದಿರುವುದು ಅವರ ಆದರ್ಶ ವ್ಯಕ್ತಿತ್ವಕ್ಕೆ ಕನ್ನಡಿ ಅನ್ನಿಸಿದೆ ಎಂದು ಸಾಹಿತಿ ಎ.ಸಿ.ಶಶಿಕಲಾ ಶಂಕರಮೂರ್ತಿ ಹೇಳಿದರು.

ಇಲ್ಲಿನ ದೊಡ್ಡಪೇಟೆಯ ವಿರಕ್ತಮಠದಲ್ಲಿ ಬಸವ ಸಂಸ್ಕೃತಿ ಅಭಿಯಾನದ ಅಂಗವಾಗಿ ಬಸವ ಕೇಂದ್ರ ವಿರಕ್ತಮಠ, ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ, ಜಾಗತಿಕ ಲಿಂಗಾಯತ ಮಹಾಸಭಾ ಮಹಿಳಾ ಘಟಕದಿಂದ ಆಯೋಜಿಸಿದ ಬಸವ ಕವಿಗೋಷ್ಠಿ ಉದ್ಘಾಟಿಸಿ ಅವರು ಮಾತನಾಡಿದರು.



ಯಾವ ಧರ್ಮವಾದರೂ ಮಾನವತೆಯನ್ನೇ ಹೇಳುತ್ತದೆ. ಆದರೆ ಮನುಷ್ಯ ತನ್ನ ಸ್ವಾರ್ಥದಿಂದ ಅಜ್ಞಾನ ಅಂಧಾನುಕರಣೆ ನಡೆಯಿಂದ ಧರ್ಮದ ಹೆಸರಲ್ಲಿ ಅಮಾನುಷ್ಯ ಕೃತ್ಯ ಮಾಡುತ್ತಲೇ ಬರುತ್ತಿದ್ದಾನೆ. ಇದನ್ನು ತಡೆಯಲು ಭಾವನಾತ್ಮಕ ಕವಿಗೋಷ್ಠಿಗಿಂತ ಬಸವಣ್ಣನವರ ವೈಚಾರಿಕತೆಯ ಮಾನವತಾ ನಡೆಯ ವಿಚಾರ ಆಧಾರಿತ ಕವಿತೆಗಳನ್ನು ವಾಚಿಸುವ ವೈಜ್ಞಾನಿಕ ಚಿಂತನೆಯ ಕವಿಗೋಷ್ಠಿಗಳ ಅವಶ್ಯಕತೆ ಇಂದು ತುಂಬಾ ಇದೆ ಅಂತೆಯೇ ನಮ್ಮ ಸಮಾಜದ ಮಠಾಧೀಶ್ವರರು ಇಂತಹ ವಚನ ಚಿಂತನೆಯ ಕವಿ ಗೋಷ್ಠಿಗೆ ಪ್ರೋತ್ಸಾಹ ಮಾಡುತ್ತಿರುವುದು ತುಂಬ ಸಂತೋಷದ ವಿಷಯ ಎಂದರು.

ಬಸವಣ್ಣನವರು ಅರಿವಿನಿಂದ ಕಟ್ಟಿದ ಈ ಧರ್ಮದಲ್ಲಿ ಇರುವುದೆಲ್ಲಾ ಮಾನವತೆಯೆ.ಇಲ್ಲಿ ಮೌಢ್ಯತೆಗಳು, ಭೇದಭಾವಗಳು ಇಲ್ಲ. ಶುದ್ಧ ಕಾಯಕ ಯೋಗದ ಸಾಕಾರ ಬದುಕು ಬೆಳಕು ಶರಣರದ್ದು. ಕಳಬೇಡ ಕೊಲಬೇಡ ಹುಸಿಯ ನುಡಿಯಲು ಬೇಡ, ಮುನಿಯಬೇಡ, ಅನ್ಯರಿಗೆ ಅಸಹ್ಯ ಪಡಬೇಡ,

ತನ್ನ ಬಣ್ಣಿಸಬೇಡ ಇದಿರ ಹಳಿಯಲು ಬೇಡ, ಇದೇ ಅಂತರಂಗ ಶುದ್ಧಿ ಇದೇ ಬಹಿರಂಗ ಶುದ್ಧಿ, ಇದೇ ನಮ್ಮ ಕೂಡಲ ಸಂಗಮ ದೇವನೊಲಿಸುವ ಪರಿ, ಬಸವಣ್ಣನವರ ಈ ಸಪ್ತ ವೈಚಾರಿಕ ಹಾಗೂ ನೈತಿಕ ನಡೆಯ ವಚನ ಸೂತ್ರ ಪಾಲನೆ ಮಾಡಿದರೆ ಸಾಕು, ಅದೇ ವಿಶ್ವಮಾನವನನ್ನಾಗಿಸಿ ಶರಣನನ್ನಾಗಿಸುತ್ತದೆ. ಇದೇ ಮನುಷ್ಯತ್ವ ಧರ್ಮ, ಲಿಂಗಾಯತ ಧರ್ಮ, ಬಸವಧರ್ಮ ಎಂದು ಹೇಳಿದರು.

ವಿರಕ್ತಮಠದ ಡಾ.ಬಸವಪ್ರಭು ಸ್ವಾಮೀಜಿ ಸಾನಿಧ್ಯವಹಿಸಿ ಮಾತನಾಡಿ, ಬಸವಣ್ಣನವರು ವಚನ ಸಾಹಿತ್ಯಗಳ ಮುಖಾಂತರ ಇಂದು ಎಲ್ಲರ ಮನೆ ಮನದಲ್ಲಿದ್ದಾರೆ. ವಿಶ್ವದ ಮಾನವ ಹಕ್ಕುಗಳ ಪ್ರಥಮ ಹೋರಾಟಗಾರ ಬಸವಣ್ಣ. ಬಸವಣ್ಣನವರ ತತ್ವಗಳು ಪ್ರಸ್ತುತ ಜೀವನಕ್ಕೆ ಅಗತ್ಯವಿದೆ. 900 ವರ್ಷಗಳ ಹಿಂದೆ ಯಾವುದೇ ರೀತಿಯ ಶಿಕ್ಷಣ, ವಿದ್ಯಾಭ್ಯಾಸ ಅವಕಾಶ ಇರಲಿಲ್ಲ, ಎಲ್ಲರನ್ನೂ ಸಮಾನವಾಗಿ ಕಾಣುವಂತಹ, ಬದುಕುವಂತಹ ಅವಕಾಶಗಳು ಇರಲಿಲ್ಲ. ಬಸವಣ್ಣನವರು ಮಾನವನ ಶೋಷಣೆ ವಿರುದ್ಧ ಹೋರಾಟ ಮಾಡಿ ಸರ್ವರಿಗೂ ಸಮಪಾಲು, ಸಮಬಾಳು ಎಂಬ ಅವಕಾಶ ನೀಡುವಂತೆ ಮಾಡಿದರು. ಸಮಸಮಾಜ ಕಟ್ಟಿದ್ದರ ಹಿನ್ನಲೆಯಲ್ಲಿಂದು ಅವರಿಗೆ ಪ್ರಜಾಪ್ರಭುತ್ವದ ಪಿತಾಮಹ ಎಂದು ಕರೆಯುತ್ತಿದ್ದೇವೆ ಎಂದರು.

ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಸಂಸ್ಥಾಪಕ ಸಾಲಿಗ್ರಾಮ ಗಣೇಶ ಶೆಣೈ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಾಗತಿಕ ಲಿಂಗಾಯತ ಮಹಾಸಭಾ ಮಹಿಳಾ ಘಟಕದ ಅಧ್ಯಕ್ಷೆ ಕುಸುಮ ಲೋಕೇಶ, ಕವಯತ್ರಿ ಲಲಿತಾ ಕಲ್ಲೇಶ ಇತರರು ಇದ್ದರು. ಪುಷ್ಪಾ ಮಂಜುನಾಥ ಸ್ವಾಗತಿಸಿದರೆ, ಎಂ.ಎಸ್.ಪ್ರೇಮಾ ಮಂಜುನಾಥ ಕಾರ್ಯಕ್ರಮ ನಿರೂಪಿಸಿದರು. ಕೆ.ಸಿ.ಉಮೇಶ ವಂದಿಸಿದರು.

# ಬಿಜೆಪಿ, ಸಂಘಪರಿವಾರದಿಂದ ಮಂಡ್ಯ ಜಿಲ್ಲೆಯನ್ನು ಮತ್ತೊಂದು ಕರಾವಳಿ ಮಾಡಲು ಹುನ್ನಾರ

**ಚಿಕ್ಕಮಗಳೂರು:** ಮಂಡ್ಯ ಜಿಲ್ಲೆಯನ್ನು ಮತ್ತೊಂದು ಕರಾವಳಿಯನ್ನಾಗಿಸಲು ಸಿ.ಟಿ.ರವಿ. ಬಸವನಗೌಡ ಪಾಟೀಲ್ ಯತ್ನಾಳ್, ಪ್ರತಾಪ್ ಸಿಂಹ, ಶೋಭಾಕರಂದ್ಲಾಜೆ ಗ್ಯಾಂಗ್ ಹಾಗೂ ಸಂಘಪರಿವಾರದವರು ಹುನ್ನಾರ ಮಾಡಿದ್ದಾರೆ. ಮಂಡ್ಯ ಜಿಲ್ಲೆ ಮದ್ದೂರಿನಲ್ಲಿ ಗಣಪತಿ ವಿಸರ್ಜನೆ ವೇಳೆ ನಡೆದ ಗಲಾಟೆಯನ್ನು ಮುಂದಿಟ್ಟುಕೊಂಡು ಈ ಕೋಮುವಾದಿಗಳು ಬಾಯಿಗೆ ಬಂದಂತೆ ಮಾತನಾಡುವ ಮೂಲಕ ಕೋಮುಗಲಭೆ ಸೃಷ್ಟಿಸಲು ಸಂಚು ನಡೆಸಿದ್ದಾರೆ. ಇದಕ್ಕೆ ಶಾಂತಿ, ಸಾಮರಸ್ಯಕ್ಕೆ ಹೆಸರಾಗಿರುವ ಮಂಡ್ಯ ಜಿಲ್ಲೆಯ ಜನತೆ ಅವಕಾಶ ನೀಡುವುದಿಲ್ಲ. ಮಂಡ್ಯ ಜಿಲ್ಲೆಯ ಕೋಮು ಸಾಮರಸ್ಯ ಹದಗೆಡಿಸಲು ಮುಂದಾಗಿರುವ ಸಂಘಪರಿವಾರದ ಈ ಗ್ಯಾಂಗ್ ಸದಸ್ಯರನ್ನು ಬಂಧಿಸುವ ಮೂಲಕ ಕಠಿಣ ಕಾನೂನು ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರ ಎಂ.ಎಸ್.ಅನಂತ್ ಒತ್ತಾಯಿಸಿದ್ದಾರೆ.

ರವಿವಾರ ಈ ಸಂಬಂಧ ಪತ್ರಿಕಾ ಪ್ರಕಟನೆ ನೀಡಿರುವ ಅವರು, ಮಂಡ್ಯದ ಮದ್ದೂರು ಪಟ್ಟಣದಲ್ಲಿ ಗಣಪತಿ ವಿಸರ್ಜನೆ ವೇಳೆ ಕಿಡಿಗೇಡಿಗಳು ನಡೆಸಿದ ಕೃತ್ಯದಿಂದಾಗಿ ಪ್ರಕ್ಷುಬ್ಧ ವಾತಾವರಣ ಉಂಟಾಗಿತ್ತು. ಕಿಡಿಗೇಡಿಗಳ ವಿರುದ್ಧ ರಾಜ್ಯ ಸರಕಾರ ಹಾಗೂ ಪೊಲೀಸರು ನಿರ್ಧಾಕ್ಷಿಣ್ಯ ಕ್ರಮ ಕೈಗೊಂಡಿದ್ದು, ಪರಿಣಾಮ ವಾತಾವರಣ ತಿಳಿಯಾಗಿದೆ. ಆದರೆ ಬಿಜೆಪಿ ನಾಯಕರು ಮತ್ತು ಸಂಘಪರಿವಾರದವರು ಈ ಸಣ್ಣ ವಿವಾದವನ್ನು ಮುಂದಿಟ್ಟುಕೊಂಡು ರಾಜಕೀಯ ಲಾಭ, ನಷ್ಟದ ಲೆಕ್ಕಾಚಾರ ಹಾಕುತ್ತಿದ್ದಾರೆ. ಇದನ್ನು ಜಿಲ್ಲಾ ಕಾಂಗ್ರೆಸ್ ತೀವ್ರವಾಗಿ ಖಂಡಿಸುತ್ತದೆ ಎಂದಿರುವ ಅವರು, ಮಂಡ್ಯ ಜಿಲ್ಲೆಗೆ ಸಂಬಂದಿಸದ ಸಿ.ಟಿ.ರವಿ. ಪ್ರತಾಪ್‌ಸಿಂಹ, ಬಸವನಗೌಡ ಪಾಟೀಲ್, ಶೋಭಾ ಕರಂದ್ಲಾಜೆ ಇಡೀ ಮಂಡ್ಯ ಜಿಲ್ಲೆಗೆ ಬೆಂಕಿ ಹಚ್ಚಲು ಹುನ್ನಾರ ನಡೆಸಿದ್ದಾರೆ. ಈ ಮೂಲಕ ಅಲ್ಲಿನ ಕೋಮು ಸಾಮರಸ್ಯವನ್ನೇ ಹದಗೆಡಿಸುತ್ತಿದ್ದಾರೆ. ಮಂಡ್ಯ ಜಿಲ್ಲೆಯನ್ನು ಮತ್ತೊಂದು ಕರಾವಳಿ ಮಾಡಿ ದ್ವೇಷದ ಬೆಂಕಿಯಲ್ಲಿ ಚಳಿ ಕಾಯಿಸಿಕೊಳ್ಳಲು ಸಂಚು ಮಾಡಿದ್ದಾರೆ, ಮಂಡ್ಯದ ಜನತೆ ಇಂತಹ ಕೋಮು ಕ್ರಿಮಿಗಳ ಮಾತುಗಳಿಗೆ



ಕಿವಿಗೊಡಲಾರರು ಎಂದಿದ್ದಾರೆ.

ಮಾಜಿ ಸಚಿವ, ವಿಪ ಸದಸ್ಯ ಸಿ.ಟಿ.ರವಿ ತೊಡೆಯೂ ತಟ್ಟುತ್ತೇವೆ, ತಲೆಯನ್ನೂ ಕಡಿಯುತ್ತೇವೆ

ಎಂದು ಕೋಮುಗಲಭೆ ಸೃಷ್ಟಿಸುವಂತಹ ಹೇಳಿಕೆ ನೀಡಿದ್ದಾರೆ, ಬಸವನಗೌಡ ಪಾಟೀಲ್ ಅವರು ನಾವು ಅಧಿಕಾರಕ್ಕೆ ಬಂದರೇ ಮಸೀದಿಗಳ ಮುಂದೆ ಹಿಂದೂಗಳಿಗೆ ಕುಣಿಯಲು

ಅವಕಾಶ ಕೊಡಿಸುತ್ತೇನೆ, ಗೋ ರಕ್ಷಕರಿಗೆ ವಿಶೇಷ ಸೌಲಭ್ಯ ನೀಡುತ್ತೇವೆ ಎಂಬ ಹೇಳಿಕೆ ನೀಡಿದ್ದಾರೆ, ಪ್ರತಾಪ್‌ಸಿಂಹ, ಶೋಭಾ ಕರಂದ್ಲಾಜೆ, ಆರ್.ಅಶೋಕ್ ಕೂಡ ಪ್ರಚೋಧನಕಾರಿಯಾಗಿ ಮಾತನಾಡಿದ್ದಾರೆ. ಈ ಹೇಳಿಕೆಗಳು ಕೋಮುಗಲಭೆ ಸೃಷ್ಟಿಸಲು ಮಾಡಿದ ಸಂಚಿನ ಭಾಗವಾಗಿದೆ. ಅದೃಷ್ಟವಶಾತ್ ಮಂಡ್ಯದ ಜನತೆ ಕೋಮುವಾದಿಗಳ ಸಂಚು ಅರ್ಥೈಸಿಕೊಂಡಿರುವುದರಿಂದ ಯಾವುದೇ ಅಹಿತಕರ ಘಟನೆಗಳು ಜರುಗಿಲ್ಲ. ಶಾಂತವಾಗಿದ್ದ ಮಂಡ್ಯ ಜಿಲ್ಲೆಯಲ್ಲಿ ಕೋಮುಗಲಭೆ ಸೃಷ್ಟಿಸಲು ಸಿ.ಟಿ.ರವಿ ಅವರಂತಹ ಕೋಮುವಾದಿಗಳು ನಡೆಸಿದ ಷಡ್ಯಂತ್ರ ವಿಫಲವಾಗಿದೆ ಎಂದಿದ್ದಾರೆ.

ಇದುವರೆಗೆ ಬಿಜೆಪಿ, ಸಂಘಪರಿವಾರದವರು ಕರಾವಳಿಯ ಜಿಲ್ಲೆಗಳನ್ನುತಮ್ಮ ಪ್ರಯೋಗಶಾಲೆಗಳನ್ನಾಗಿ

**ಮಂಡ್ಯ ಜಿಲ್ಲೆಯನ್ನು ಮತ್ತೊಂದು ಕರಾವಳಿಯನ್ನಾಗಿಸಲು ಸಿ.ಟಿ.ರವಿ. ಬಸವನಗೌಡ ಪಾಟೀಲ್ ಯತ್ನಾಳ್, ಪ್ರತಾಪ್ ಸಿಂಹ, ಶೋಭಾಕರಂದ್ಲಾಜೆ ಗ್ಯಾಂಗ್ ಹಾಗೂ ಸಂಘಪರಿವಾರದವರು ಹುನ್ನಾರ ಮಾಡಿದ್ದಾರೆ.**

ಮಾಡಿಕೊಂಡಿದ್ದರು. ಈಗ ಮಂಡ್ಯ ಜಿಲ್ಲೆಯನ್ನು ಮತ್ತೊಂದು ಕರಾವಳಿಯನ್ನಾಗಿಸಲು ಷಡ್ಯಂತ್ರ ನಡೆಸಿದ್ದಾರೆ. ಬಿಜೆಪಿ ನಾಯಕರು ಈ ಹಿಂದೆಯೂ ಮಂಡ್ಯದಲ್ಲಿ ಕೋಮುಗಲಭೆ ಸೃಷ್ಟಿಸಲು ಹುನ್ನಾರ ನಡೆಸಿದ್ದರು. ಅವುಗಳಲ್ಲಿ ವಿಫಲವಾದ ಬಳಿಕ ಈಗ ಮದ್ದೂರು ಗಲಾಟೆ ಮುಂದಿಟ್ಟುಕೊಂಡು ಕೋಮುಗಲಭೆ ಸೃಷ್ಟಿಸಲು ಮುಂದಾಗಿದ್ದಾರೆ. ರಾಜ್ಯ ಸರಕಾರ ಮತ್ತು ಮಂಡ್ಯದ ಜನತೆ ಎಚ್ಚೆತ್ತುಕೊಂಡಿದ್ದರಿಂದ ಅಲ್ಲಿ ಯಾವುದೇ ಅನಾಹುತಗಳು ಸಂಭವಿಸಿಲ್ಲ ಎಂದಿದ್ದಾರೆ.

ಸಿ.ಟಿ.ರವಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಇದನ್ನೇ ಮಾಡಿ 4 ಅವಧಿಗೆ ಶಾಸಕರಾಗಿದ್ದರು, ಅಧಿಕಾರವಧಿಯುದ್ದಕ್ಕೂ ಇಂತಹ ಕೃತ್ಯಗಳನ್ನೇ ನಡೆಸುತ್ತಲೇ ಕೋಟಿ ರವಿ ಆದರು,

ಮತದಾರರು ಲೂಟಿ ರವಿ ಎಂದು ಕರೆದು ಈ ಬಾರಿಯ ವಿಧಾನಸಭೆ ಚುನಾವಣೆಯಲ್ಲಿ ಸೋಲಿಸಿ ಮನೆಗೆ ಕಳುಹಿಸಿದ್ದಾರೆ,

ಸೋತ ಬಳಿಕ ಜಿಲ್ಲೆಯಲ್ಲಿ ಕೋಮುಗಲಭೆ ಸೃಷ್ಟಿಸಲು ಜನತೆ ಅವಕಾಶ ನೀಡದ ಪರಿಣಾಮ ಸಿಟಿ ರವಿಗೆ ಕೆಲಸ ಇಲ್ಲದಂತಾಗಿದೆ. ಸದ್ಯ ಅವರು ಮಂಡ್ಯದಲ್ಲಿ ತಮ್ಮ ಬೇಳೆ ಬೇಯಿಸಿಕೊಳ್ಳಲು ಹೋಗಿ ಕೇಸು ಹಾಕಿಸಿಕೊಂಡಿದ್ದಾರೆ. ಮಂಡ್ಯದ ಜನತೆ ಇಂತಹ ಕೋಮು ಕ್ರಿಮಿಗಳಿಗೆ ತಕ್ಕ ಪಾಠ ಕಲಿಸಬೇಕು. ಸಿ.ಟಿ.ರವಿ, ಬಸವನಗೌಡ ಪಾಟೀಲ್, ಪ್ರತಾಪ್‌ಸಿಂಹ ಕೋಮುಸಂಘರ್ಷಕ್ಕೆ ಕಾರಣವಾಗುವ ಪ್ರಚೋಧನಕಾರಿ ಹೇಳಿಕೆಯನ್ನು ಮುಂದುವರಿಸಿದಲ್ಲಿ ಜನತೆ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸುವುದು ಖಚಿತ ಎಂದು ಅವರು ಎಚ್ಚರಿಸಿದ್ದಾರೆ.


**ಮಾನ್ಯ 1ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಹಾಗೂ ಎಂ.ಎ.ಸಿ.ಟಿ., ದಾವಣಗೆರೆ**

**ಎಂ.ವಿ.ಸಿ .ನಂ727/2023**

**ಅರ್ಜಿದಾರರು:** ಸಿದ್ದೇಶ್

**ವಿರುದ್ಧ**

**ಎದುರುದಾರರು:** ಜೀವನ್.ಸಿ.ಎಸ್.ಮತ್ತು ಇನ್ನೊಬ್ಬರು
**ಎದುರುದಾರರುನಂ1/:**ಜೀವನ್.ಸಿ.ಎಸ್.ಬಿನ್ ಶಂಭುಲಿಂಗಪ್ಪ,
ವಯಸ್ಸು 40 ವರ್ಷ ವಾಸ: ನಂ10. 14ನೇಬಿ-ಕ್ರಾಸ್ -ಸಾರಕ್ಕಿ 1ನೇ ಫೇಸ್, ಜೆ.ಪಿ. ನಗರ, ಬೆಂಗಳೂರು-560079 (ಕೆಎ-01/ಎಂವೈ-6528 ನೇ ಕಾರ್ ಮಾಲೀಕರು)

**ಸಿ.ಪಿ.ಸಿ ಆದೇಶ 5 ನಿಯಮ 20 ರ ಅಡಿಯಲ್ಲಿ 1ನೇ ಎದುರುದಾರರ ವಿರುದ್ಧ ನೀಡಲಾದ ಪ್ರಕಟಣಾ ನೋಟೀಸು**

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರು ಎದುರುದಾರರ ವಿರುದ್ಧ ವಾಹನ ಅಪಘಾತದಲ್ಲಿ ಗಾಯಗೊಂಡಿದ್ದಕ್ಕಾಗಿ ಪರಿಹಾರ ಕೋರಿ ಮಾನ್ಯ ಘನ ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ ನೀವು 1ನೇ ಎದುರುದಾರರಾಗಿದ್ದು, ನ್ಯಾಯಾಲಯವು ನಿಮ್ಮ ವಿರುದ್ಧ ನ್ಯಾಯಾಲಯದಿಂದ ಸಮನ್ಸ್ ಅನ್ನು ನೋಂದಾಯಿತ ಅಂಚೆಯ ಮೂಲಕ ಕಳಿಸಿದ್ದರೂ ಸಹಾ ಅವು ನಿಮಗೆ ಜಾರಿಯಾಗಿರುವುದಿಲ್ಲ. ಕಾರಣ ನಿಮ್ಮ ಹಾಜರಾತಿಗಾಗಿ ದಿನಾಂಕ: 28.10.2025 ರಂದು ಬೆಳಗ್ಗೆ 11-00 ಗಂಟೆಗೆ ಮುದ್ದತ್ತು ನಿಗಧಿಯಾಗಿದ್ದು, ಆ ದಿನ ನೀವು ಖುದ್ದಾಗಿಯಾಗಲೀ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ನಿಮ್ಮ ವಿರುದ್ಧ ಏಕಪಕ್ಷಿಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ. ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ, ದಿನಾಂಕ : 11.09.2025ರಂದು ಕೊಡಲ್ಪಟ್ಟಿದೆ.

**ನ್ಯಾಯಾಲಯದ ಅಪ್ಪಣೆಯ ಮೇರೆಗೆ.**

**ಶಿರಸ್ತೇದಾರ್**
ಮಾನ್ಯ 1ನೇ ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್ ಹಾಗೂ ಎಂ.ಎ.ಸಿ.ಟಿ. ನ್ಯಾಯಾಲಯ, ದಾವಣಗೆರೆ

**ಅರ್ಜಿದಾರರ ಪರ ವಕೀಲರು**
(ದಿನೇಶ್.ಹೆಚ್.ಪಾಟೀಲ್)

# ಅಯ್ಯೋ ಶಿವನೇ' ಹಾಡಿಗೆ ಮೆಚ್ಚುಗೆ

**ಹೊಸ ಪೀಳಿಗೆಗಾಗಿ 'ಕಲ್ಟ್' ವಿನ್ಯಾಸಗೊಳಿಸಲಾಗಿದೆ: ನಿರ್ದೇಶಕ ಅನಿಲ್ ಕುಮಾರ್**

ಝೈದ್ ಖಾನ್, ರಚಿತಾ ರಾಮ್ ಮತ್ತು ಮಲೈಕಾ ವಸುಪಾಲ್ ನಟನೆಯ 'ಕಲ್ಟ್' ಚಿತ್ರ ಈಗಾಗಲೇ ಸಾಕಷ್ಟು ನಿರೀಕ್ಷೆ ಮೂಡಿಸಿದ್ದು, ಆಕ್ಷನ್-ರೊಮ್ಯಾಂಟಿಕ್ ಸಿನಿಮಾದ ಚಿತ್ರೀಕರಣ ಮುಗಿದಿದೆ. ಇದೀಗ ಚಿತ್ರದ ಮೊದಲ ಹಾಡು ಬಿಡುಗಡೆಯಾಗಿದ್ದು, ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿದೆ.

ಹಾಡಿಗೆ ಅರ್ಜುನ್ ಜನ್ಯ ಸಂಗೀತ ಸಂಯೋಜಿಸಿದ್ದು, ನಿರ್ದೇಶಕ ಅನಿಲ್ ಕುಮಾರ್ ಅವರೇ ಸಾಹಿತ್ಯ ಬರೆದಿದ್ದಾರೆ. 'ಅಯ್ಯೋ ಶಿವನೇ' ಹಾಡನ್ನು ಕರ್ನಾಟಕದ ವಿವಿಧ ಸಾಂಸ್ಕೃತಿಕ ಮತ್ತು ಐತಿಹಾಸಿಕವಾಗಿ ಶ್ರೀಮಂತ ಸ್ಥಳಗಳಾದ ಉಡುಪಿ, ಮಂಗಳೂರು, ಶ್ರೀರಂಗಪಟ್ಟಣ, ಚಿತ್ರದುರ್ಗ ಮತ್ತು ವಾಣಿ ವಿಲಾಸ ಸಾಗರ ಅಣೆಕಟ್ಟಿನ ಮೂಲಕ ಸಾಗುವ ಮ್ಯೂಸಿಕಲ್ ಪ್ರಯಾಣವಾಗಿದೆ. ಹಾಡಿನ ಜಗತ್ತನ್ನು ಜೀವಂತಗೊಳಿಸಲು ನಾವು ವ್ಯಾಪಕವಾಗಿ ಪ್ರಯಾಣಿಸಬೇಕಾಯಿತು ಎನ್ನುತ್ತಾರೆ ನಿರ್ದೇಶಕರು.

ಕೃಷ್ಣಂ ಪ್ರಣಯ ಸಖಿ ಚಿತ್ರದ 'ದ್ವಾಪರ' ಹಾಡನ್ನು ಹಾಡಿ ಮೆಚ್ಚುಗೆ ಗಳಿಸಿದ್ದ ಜಸ್ಕರನ್ ಸಿಂಗ್ ಮತ್ತು ಪೃಥ್ವಿ ಭಟ್ ಈ ಹಾಡಿಗೆ ಧ್ವನಿಯಾಗಿದ್ದಾರೆ.

'ಈ ಚಿತ್ರವನ್ನು ಹೊಸ ಪೀಳಿಗೆಗಾಗಿ ವಿನ್ಯಾಸಗೊಳಿಸಲಾಗಿದೆ. ಹೊಸ ದೃಶ್ಯ ಶೈಲಿಯೊಂದಿಗೆ ಆಕ್ಷನ್ ಮತ್ತು ಪ್ರಣಯವನ್ನು ಮಿಶ್ರಣ ಮಾಡಲಾಗಿದೆ'



ಎಂದು ಅನಿಲ್ ಕುಮಾರ್ ಹೇಳುತ್ತಾರೆ.

ಲೋಕಿ ಸಿನಿಮಾಸ್ ಅಡಿಯಲ್ಲಿ ನಿರ್ಮಿಸಲಾದ ಮತ್ತು ಕೆವಿಎನ್ ಪ್ರೊಡಕ್ಷನ್ಸ್‌ನಿಂದ ಬೆಂಬಲಿತವಾದ ಕಲ್ಟ್ ಚಿತ್ರವು ಬನಾರಸ್ ಮೂಲಕ ಖ್ಯಾತಿ ಗಳಿಸಿದ್ದ ಝೈದ್ ಖಾನ್ ಅವರ ಎರಡನೇ ಚಿತ್ರವಾಗಿದೆ.

ಚಿತ್ರಕ್ಕೆ ಜಗದೀಶ್ ವಾಲಿ ಅವರ ಛಾಯಾಗ್ರಹಣ, ಕೆಎಂ ಪ್ರಕಾಶ್ ಅವರ ಸಂಕಲನ ಮತ್ತು ಸಂತೋಷ್ ಶೇಖರ್ ಅವರ ನೃತ್ಯ ಸಂಯೋಜನೆ ಇದೆ. ರವಿವರ್ಮ ಅವರ ಸಾಹಸ ವಿನ್ಯಾಸವನ್ನು ಹೊಂದಿದೆ.

# ಜಿಯೋಹಾಟ್‌ಸ್ಟಾರ್‌ನಲ್ಲಿ ರಾಜ್ ಬಿ ಶೆಟ್ಟಿ ನಿರ್ಮಾಣದ 'ಸು ಫ್ರಮ್ ಸೋ' ಬಿಡುಗಡೆ

**ಚಿತ್ರಮಂದಿರಗಳಲ್ಲಿ ಭರ್ಜರಿ ಯಶಸ್ಸು ಕಂಡ ಬಳಿಕ ಸು ಫ್ರಮ್ ಸೋ ಚಿತ್ರವು ಇದೀಗ ಒಟಿಟಿಯಲ್ಲಿ ಬಿಡುಗಡೆಗೆ ಸಿದ್ಧವಾಗಿದೆ. ಶನೀಲ್ ಗೌತಮ್, ಜೆಪಿ ತುಮಿನಾಡ್, ಸಂಧ್ಯಾ ಅರಕೆರೆ, ಪ್ರಕಾಶ್ ತುಮಿನಾಡ್, ದೀಪಕ್ ರೈ ಪಣಾಜೆ, ಮೈಮ್ ರಾಮದಾಸ್ ಮತ್ತು ರಾಜ್ ಬಿ ಶೆಟ್ಟಿ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ ಹಿಟ್ ಚಿತ್ರ 'ಸು ಫ್ರಮ್ ಸೋ' ಕೊನೆಗೂ ಒಟಿಟಿ ವೇದಿಕೆಯಲ್ಲಿ ಬಿಡುಗಡೆಯಾಗುತ್ತಿದೆ. ಅಪ್ಲಿಕೇಶನ್‌ನಲ್ಲಿನ ವಿವರಗಳ ಪ್ರಕಾರ, ಚಿತ್ರವು ಸೆಪ್ಟೆಂಬರ್ 9 ರಂದು ಜಿಯೋಹಾಟ್‌ಸ್ಟಾರ್‌ನಲ್ಲಿ ಬಿಡುಗಡೆಯಾಗುತ್ತಿದೆ.**




'ಸು ಫ್ರಮ್ ಸೋ' ಬಿಡುಗಡೆಯಾದಾಗಿನಿಂದ ರಾಜ್ಯದಾದ್ಯಂತ ಭಾರಿ ಸದ್ದು ಮಾಡಿದ್ದು, ಕನ್ನಡ ಸೇರಿದಂತೆ ಹಲವು ಭಾಷೆಗಳಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ. ಜುಲೈ 25 ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರವು ಗಲ್ಲಾಪೆಟ್ಟಿಗೆಯಲ್ಲಿ ಭರ್ಜರಿ ಕಲೆಕ್ಷನ್ ಮಾಡಿದೆ. ನಟನೆಯೊಂದಿಗೆ ಜೆಪಿ ತುಮಿನಾಡ್ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ.

ಅಗಾಧವಾದ ಸಕಾರಾತ್ಮಕ ವಿಮರ್ಶೆಗಳ ನಂತರ, ದಕ್ಷಿಣ ಭಾರತದ ರಾಜ್ಯಗಳಲ್ಲಿ ಚಿತ್ರಕ್ಕೆ ಬೇಡಿಕೆ ಕಂಡುಬಂದ ನಂತರ ಆಯಾ ಭಾಷೆಗಳಲ್ಲಿ ಬಿಡುಗಡೆ ಮಾಡಲಾಯಿತು. ಇದರ ಪರಿಣಾಮವಾಗಿ ಚಿತ್ರವು ದೇಶದಾದ್ಯಂತ ಬಾಕ್ಸ್ ಆಫೀಸ್‌ನಲ್ಲಿ 120 ಕೋಟಿ ರೂ.ಗೂ ಅಧಿಕ ಗಳಿಕೆ ಕಂಡಿದೆ. ಎಕ್ಕ ಮತ್ತು ಜೂನಿಯರ್ ಚಿತ್ರಗಳೊಂದಿಗೆ ತೆರೆಗೆ ಬಂದ 'ಸು ಫ್ರಮ್ ಸೋ' ಈ ವರ್ಷದ ಅತಿ ಹೆಚ್ಚು ಗಳಿಕೆ ಕಂಡ ಕನ್ನಡ ಚಿತ್ರವಾಗಿದೆ. ಕೆಜಿಎಫ್, ಕಾಂತಾರ ಮತ್ತು 777 ಚಾರ್ಲಿ ನಂತರ ಸಾವಿರಾರು ಪ್ರೇಕ್ಷಕರನ್ನು ಚಿತ್ರಮಂದಿರಗಳಿಗೆ ಕರೆತಂದ ಕೀರ್ತಿಗೆ ಪಾತ್ರವಾಗಿದೆ.

, ಬೇಡಿಕೆಯಿಂದಾಗಿ ಸುಮಾರು 175 ಪರದೆಗಳಲ್ಲಿ ಬಿಡುಗಡೆಯಾದ ನಂತರ ಈ ಚಿತ್ರವು ಕೇರಳದಲ್ಲಿ ಗಣನೀಯ ಪ್ರಮಾಣದ ಕಲೆಕ್ಷನ್ ಮಾಡಿದೆ. ಹಲವಾರು ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗುತ್ತಿದ್ದರೂ, ಪ್ರೇಕ್ಷಕರನ್ನು ಚಿತ್ರಮಂದಿರಗಳತ್ತ ಕರೆತರುವಲ್ಲಿ ಯಶಸ್ವಿಯಾಗಿದೆ.

ಕನ್ನಡದಲ್ಲಿ 17ಕ್ಕೂ ಹೆಚ್ಚು ಚಿತ್ರಗಳನ್ನು ನಿರ್ಮಿಸಿ, ದಕ್ಷಿಣ ಭಾರತದ ಇತರ ಭಾಷೆಗಳ 60ಕ್ಕೂ ಚಿತ್ರಗಳನ್ನು ವಿತರಿಸಿರುವ ಎನ್.ಎಸ್. ರಾಜ್‌ಕುಮಾರ್ ಇತ್ತೀಚೆಗೆ ಸು ಫ್ರಮ್ ಸೋ ಚಿತ್ರದ ತಮಿಳು ರಿಮೇಕ್ ಹಕ್ಕುಗಳನ್ನು ದಾಖಲೆ ಬೆಲೆಗೆ ಪಡೆದುಕೊಂಡಿದ್ದರು.

# ನಟ ದರ್ಶನ್ ಪತ್ನಿ ವಿಜಯಲಕ್ಷ್ಮೀ ಮನೆಯಲ್ಲಿ ಕಳ್ಳತನ: ಕೇಸ್ ದಾಖಲು



**ಬೆಂಗಳೂರು:** ರೇಣುಕಾಸ್ವಾಮಿ ಹತ್ಯೆ ಪ್ರಕರಣ ಸಂಬಂಧ ಜಾಮೀನು ರದ್ದಾಗಿ ಆರೋಪಿ ನಟ ದರ್ಶನ್ ಮತ್ತೆ ಜೈಲು ಸೇರಿದ್ದಾರೆ. ಪತಿ ದರ್ಶನ್ ಮತ್ತೆ ಜೈಲು ಸೇರಿದ ಸಂಕಟದಲ್ಲಿರುವ ವಿಜಯಲಕ್ಷ್ಮೀಗೆ ಇದೀಗ ಮತ್ತೊಂದು ಶಾಕ್ ಎದುರಾಗಿದೆ.

ನಟ ದರ್ಶನ್ ಪತ್ನಿ ವಿಜಯಲಕ್ಷ್ಮೀ ಅವರ ಬೆಂಗಳೂರಿನ ನಿವಾಸದಲ್ಲಿ 3 ಲಕ್ಷ ರೂ. ಕಳ್ಳತನವಾಗಿದ್ದು, ಮ್ಯಾನೇಜರ್ ಚೆನ್ನಮ್ಮನಕೆರೆ ಅಚ್ಚುಕಟ್ಟು ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಮೈಸೂರಿಗೆ ತೆರಳಿದ್ದ ಸಂದರ್ಭದಲ್ಲಿ ಕಳ್ಳತನ ನಡೆದಿದ್ದು, ಮನೆಕೆಲಸದವರ ಮೇಲೆ ಶಂಕೆ ವ್ಯಕ್ತವಾಗಿದೆ.

ಮನೆಕೆಲಸದವರ ಮೇಲೆ ಶಂಕೆ ವ್ಯಕ್ತಪಡಿಸಿರುವ ಮ್ಯಾನೇಜರ್ ನಾಗರಾಜ್ ದೂರು ದಾಖಲಿಸಿದ್ದಾರೆ. 3 ಲಕ್ಷ ರೂಪಾಯಿ ಕಳ್ಳತನವಾಗಿರುವ ಬಗ್ಗೆ ದೂರಿನಲ್ಲಿ ಉಲ್ಲೇಖಿಸಲಾಗಿದೆ. ಸೆಪ್ಟೆಂಬರ್ 4ರಂದು ಕೆಲಸದ ನಿಮಿತ್ ವಿಜಯಲಕ್ಷ್ಮೀ ದರ್ಶನ್ ಮೈಸೂರಿಗೆ ತೆರಳಿದ್ದರು.ಮೈಸೂರಿಗೆ ತೆರಳುವ ಮುನ್ನ ಮನೆಯ ವಾಡ್ರೂಬ್ ಕಾಟನ್ ಬಾಕ್ಸ್ ನಲ್ಲಿ ಹಣ ತೆಗೆದುಕೊಡಲು ಮ್ಯಾನೇಜರ್‌ಗೆ ಹೇಳಿದ್ದರು. ಅದರಲ್ಲಿನ ಸ್ವಲ್ಪ ಹಣ ತೆಗೆದು ಉಳಿದ ಹಣವನ್ನು ವಾಡ್ರೂಬ್ ಕಾಟನ್ ಬಾಕ್ಸ್ ನಲ್ಲಿಯೇ ಮ್ಯಾನೇಜರ್ ಇರಿಸಿದ್ದರು. ನಂತರ ಮನೆ ಬೀಗವನ್ನು ತಾಯಿಗೆ ನೀಡಿದ್ದ ವಿಜಯಲಕ್ಷ್ಮೀ ಅವರ ಮ್ಯಾನೇಜರ್ ಹೊರಗಡೆ ತೆರಳಿದ್ದರು.

ಸೆಪ್ಟೆಂಬರ್ 7 ರಂದು ಬೆಂಗಳೂರಿಗೆ ವಿಜಯಲಕ್ಷ್ಮಿ ವಾಪಸ್ ಬಂದಿದ್ದಾರೆ. ಸೆಪ್ಟೆಂಬರ್ 8ರಂದು ವಾಡ್ರೂಬ್ ಕಾಟನ್ ಬಾಕ್ಸ್ ನೋಡಿದಾಗ ಅಲ್ಲಿರಿಸಿದ್ದ ಹಣ ಇರಲಿಲ್ಲ. ಹಣ ಸಿಗದಿದ್ದಾಗ ವಿಜಯಲಕ್ಷ್ಮಿ ಹಾಗೂ ಮ್ಯಾನೇಜರ್ ನಾಗರಾಜ್ ಮನೆಯಲ್ಲಿ ಹುಡುಕಾಟ ನಡೆಸಿದ್ದಾರೆ.

ಹಣ ಸಿಗದಿದ್ದಾಗ ಸಿಕೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ವಿಜಯಲಕ್ಷ್ಮೀ ದರ್ಶನ್ ವಾಸವಾಗಿರುವ ಹೊಸಕೆರೆಹಳ್ಳಿ ಪ್ರೆಸ್ಟೀಜ್ ಅಪಾರ್ಟ್ಮೆಂಟ್ ಫ್ಲಾಟ್ ನಲ್ಲಿ ಈ ಕಳ್ಳತನ ನಡೆದಿದೆ.

# ಲಕ್ಷ್ಮೀ ನಿವಾಸ ಧಾರಾವಾಹಿ ನಿರ್ಮಾಪಕರಿಂದ 1 ಕೋಟಿ ರೂ ವಂಚನೆ: ದೂರು ದಾಖಲಿಸಿದ ಸೃಜನ್ ಲೋಕೇಶ್

**ಬೆಂಗಳೂರು:** ಲಕ್ಷ್ಮೀ ನಿವಾಸ ಧಾರಾವಾಹಿಯ ನಿರ್ಮಾಣಕ್ಕಾಗಿ ಸೃಜನ್ ಲೋಕೇಶ್ ಅವರ ಲೋಕೇಶ್ ಪ್ರೊಡಕ್ಷನ್ಸ್ ಸಂಸ್ಥೆಯಿಂದ ನಿರ್ಮಾಪಕ ಸತ್ಯ ಮತ್ತು ಅವರ ಪತ್ನಿ ನಿರ್ಮಲಾ 1 ಕೋಟಿ ರೂಪಾಯಿ ಸಾಲ ಪಡೆದು, ಹಿಂತಿರುಗಿಸದೆ ವಂಚಿಸಿದ್ದಾರೆ ಎನ್ನಲಾಗಿದೆ. ಹೀಗಾಗಿ ಸೃಜನ್ ಲೋಕೇಶ್ ಮ್ಯಾನೇಜರ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.



ಜೀ ಕನ್ನಡ ವಾಹಿನಿಯಲ್ಲಿ ಪ್ರಸಾರವಾಗುತ್ತಿರುವ ಲಕ್ಷ್ಮೀ ನಿವಾಸ ಧಾರಾವಾಹಿಯ ನಿರ್ಮಾಣಕ್ಕಾಗಿ ಸೃಜನ್ ಲೋಕೇಶ್ ಅವರ ಲೋಕೇಶ್ ಪ್ರೊಡಕ್ಷನ್ಸ್ ಸಂಸ್ಥೆಯಿಂದ ನಿರ್ಮಾಪಕ ಸತ್ಯ ಮತ್ತು ಅವರ ಪತ್ನಿ ನಿರ್ಮಲಾ1 ಕೋಟಿ ರೂಪಾಯಿ ಹಣವನ್ನು ಸಾಲವಾಗಿ ಪಡೆದಿದ್ದರು.

2023ರ ನವೆಂಬರ್‌ನಲ್ಲಿ ಒಪ್ಪಂದ ಮಾಡಿಕೊಂಡಿದ್ದ ಆರೋಪಿಗಳು, 2024ರ ಏಪ್ರಿಲ್ 1ರಿಂದ ಪ್ರತಿ ತಿಂಗಳು 5 ಲಕ್ಷ ರೂಪಾಯಿ ಕಂತುಗಳಲ್ಲಿ ಹಣವನ್ನ ವಾಪಾಸ್ ಕೊಡುವುದಾಗಿ ಅಗ್ರಿಮೆಂಟ್ ಮಾಡಿಕೊಂಡಿದ್ದರು. ಆದರೆ ಇದುವರೆಗೂ ಯಾವುದೇ ಹಣ ಪಾವತಿಸದ ಹಿನ್ನೆಲೆ, ಒಪ್ಪಂದಲ್ಲಿರುವ ಷರತ್ತು ಉಲ್ಲಂಘಿಸಿದ್ದಕ್ಕಾಗಿ ದೂರು ದಾಖಲಾಗಿದೆ.

ಸೃಜನ್ ಲೋಕೇಶ್ ಅವರ ಲೋಕೇಶ್ ಸಂಸ್ಥೆಯ ಜಿಪಿಎ ಹೋಲ್ಡರ್ ಅಗ್ನಿ ಯು ಸಾಗರ್ ಎಂಬುವವರು ಬೆಂಗಳೂರಿನ ಸಿ.ಕೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ದೂರಿನ ಮೇರೆಗೆ ನಿರ್ಮಾಪಕ ಸತ್ಯ ಮತ್ತು ಅವರ ಪತ್ನಿ ನಿರ್ಮಲಾ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಸಾಯಿ ನಿರ್ಮಲಾ ಪ್ರೊಡಕ್ಷನ್ಸ್ ಕಂಪನಿಯ ಹೆಸರಿನಲ್ಲಿ ನಡೆದ ಹಣಕಾಸಿನ ವಹಿವಾಟುಗಳು ತನಿಖೆಗೆ ಒಳಪಟ್ಟಿವೆ ಎಂದು ಹೇಳಲಾಗುತ್ತಿದೆ.

# ತೆರೆಗೆ ಬರಲು 'ಬಿಳಿಚುಕ್ಕಿ ಹಳ್ಳಿಹಕ್ಕಿ' ಸಿದ್ದ

ಮಹಿರ ಖ್ಯಾತಿಯ ಮಹೇಶ್ ಗೌಡ ನಿರ್ಮಿಸಿ, ನಿರ್ದೇಶಿಸಿರುವ 'ಬಿಳಿಚುಕ್ಕಿ ಹಳ್ಳಿಹಕ್ಕಿ' ಚಿತ್ರವು ಈಗಾಗಲೇ ತನ್ನ ಪೋಸ್ಟರ್‌ಗಳಿಂದ ಕುತೂಹಲ ಕೆರಳಿಸುತ್ತಿದೆ. ಈ ಚಿತ್ರವು ಈಗ ಬಿಡುಗಡೆಗೆ ಸಜ್ಜಾಗಿದ್ದು, ರಾಜ್ಯದಾದ್ಯಂತ ಅಕ್ಟೋಬರ್ 24 ರಂದು ಚಿತ್ರಮಂದಿರಗಳಲ್ಲಿ ತೆರೆಕಾಣಲಿದೆ.

ನಿರ್ದೇಶಕರ ಪ್ರಕಾರ, ಈ ಚಿತ್ರವು ಅಸಾಮಾನ್ಯ ವಿಷಯದ ಮೇಲೆ ಅವಲಂಬಿತವಾಗಿದೆ. ಇದು ತೊನ್ನು ಎಂದು ಕರೆಯಲ್ಪಡುವ ವಿಟಿಲಿಗೋ ರೋಗದಿಂದ ಬಳಲುವ ಅನೇಕರು ಅನುಭವಿಸುವ ಕಥೆಯನ್ನು ಹೇಳಲಿದೆ.

ಆದರೆ, ತೆರೆ ಮೇಲೆ ವಿರಳವಾಗಿ ಕಂಡುಬರುವ ವಿಟಿಲಿಗೋವನ್ನು ಕೇಂದ್ರೀಕರಿಸಿದ ಮೊದಲ ಕನ್ನಡ ಚಿತ್ರವಾಗಿದೆ. ವೈದ್ಯಕೀಯ ಜಗತ್ತು ಇದನ್ನು ಚರ್ಮದ ಅಸ್ವಸ್ಥತೆ ಎಂದು ವರ್ಗೀಕರಿಸಿದರೂ, ಅದರ ಸುತ್ತಲೂ ಕಳಂಕ, ಪುರಾಣ ಮತ್ತು ತಪ್ಪು ತಿಳುವಳಿಕೆಯ ಪದರಗಳಿವೆ. ವಿಟಿಲಿಗೋದಿಂದ ಪ್ರಭಾವಿತವಾದ ಜೀವನದ ಆಂತರಿಕ



ಪ್ರಕ್ಷುಬ್ಧತೆಯನ್ನು ಸೆರೆಹಿಡಿಯಲು ಮಹೇಶ್ ಪ್ರಯತ್ನಿಸಿದ್ದಾರೆ.

'ಮಹಿರ' ಚಿತ್ರವನ್ನು ಮೊದಲು ನಿರ್ದೇಶಿಸಿದ್ದ ಮಹೇಶ್, ಹೊನ್ನುಡಿ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಈ ಚಿತ್ರವನ್ನು ನಿರ್ಮಿಸಿದ್ದಾರೆ. ಈ ಚಿತ್ರದ ತಯಾರಿಗಾಗಿಯೇ ಸಾಕಷ್ಟು ಸಮಯ ಮೀಸಲಿಟ್ಟಿದ್ದಾರೆ. ಕವಿತಾ ಪಾತ್ರದಲ್ಲಿ ರಂಗಭೂಮಿ ಪ್ರತಿಭೆ ಕಾಜಲ್ ಕುಂದರ್ ನಟಿಸಿದ್ದಾರೆ. ವಿಶಿಷ್ಟ ತಿರುವಿನಲ್ಲಿ, ವಿಟಿಲಿಗೋ ಇರುವ ಮಹೇಶ್ ನಾಯಕನಾಗಿ ನಟಿಸುತ್ತಾರೆ. ಪಾತ್ರಕ್ಕೆ ಜೀವಂತ ಅನುಭವವನ್ನು ತರುತ್ತಾರೆ.

# 'ದಿಂಸೋಲ್'ನಾಗೇಂದ್ರ ಗಾಣಿಗ ಆಕ್ಷನ್ ಕಟ್

ನಾಗೇಂದ್ರ ಗಾಣಿಗ ನಿರ್ದೇಶನದ ದಿಂಸೋಲ್, ಕರಾವಳಿ ಸಂಸ್ಕೃತಿಯ ಸೊಗಡನ್ನು ಸಾರಲಿದೆ. ಶಿವರಾತ್ರಿ ಹಬ್ಬದ ಸಮಯದಲ್ಲಿ ನಡೆಸುವ ಆಚರಣೆಯಿಂದ ಪ್ರೇರಿತವಾದ ಶೀರ್ಷಿಕೆಯು ಇದೀಗ ತೀವ್ರ ನಿರೀಕ್ಷೆ ಹುಟ್ಟುಹಾಕಿದೆ. ಈ ಪ್ರದೇಶದ ರೋಮಾಂಚಕ ಪದ್ಧತಿಗಳು, ಪುರಾಣಗಳು ಮತ್ತು ದೈವಿಕ ಜ್ಞಾನವನ್ನು ತೆರೆಮೇಲೆ ತರುವ ಗುರಿಯನ್ನು ಹೊಂದಿದೆ.

'ನಮ್ಮ ಕರಾವಳಿ ಸಂಸ್ಕೃತಿಯ ಚೈತನ್ಯವನ್ನು ದೃಶ್ಯರೂಪದಲ್ಲಿ ಜೀವಂತಗೊಳಿಸಲು ನಾವು ಬಯಸಿದ್ದೇವೆ' ಎಂದು ನಾಗೇಂದ್ರ ಗಾಣಿಗ ಹೇಳುತ್ತಾರೆ. ಚಿತ್ರದ ಫಸ್ಟ್ ಲುಕ್ ಈಗಾಗಲೇ ಕುತೂಹಲವನ್ನು ಹುಟ್ಟುಹಾಕಿದೆ. ರಕ್ತೇಶ್ವರಿಯನ್ನು ಒಳಗೊಂಡ ಹೊಸದಾಗಿ ಬಿಡುಗಡೆಯಾದ ಮೋಷನ್ ಪೋಸ್ಟರ್, ಚಿತ್ರದ ನಿರೂಪಣೆಯ ದೈವಿಕ ಮೇಲ್ಪದರಗಳನ್ನು ತೆರೆದಿಟ್ಟಿದೆ.

ಶಿವಾನಿ ರೈ ನಾಯಕಿಯಾಗಿದ್ದು,ರಥಾಕಿರಣ್ ನಾಯಕನಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಈ ಜೋಡಿ ಈ ಹಿಂದೆ ಅಭಿರಾಮಚಂದ್ರ ಚಿತ್ರದಲ್ಲಿ ನಟಿಸಿದ್ದರು ಮತ್ತು ಇದೀಗ ಎರಡನೇ ಬಾರಿಗೆ ಮತ್ತೆ ಒಂದಾಗಿದ್ದಾರೆ. ನಟ ರಾಕೇಶ್ ಅಡಿಗ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಇನ್ನುಳಿದಂತೆ





ರಂಗಾಯಣ ರಘು, ಮಾನಸಿ ಸುಧೀರ್ ಮತ್ತು ಅಮೃತಾ ಕಾಣಿಸಿಕೊಳ್ಳಲಿದ್ದಾರೆ.

ನಿರ್ಮಾಪಕ ಸಚಿನ್ ವಿ ಅವರ ಬೆಂಬಲದೊಂದಿಗೆ, ದಿಂಸೋಲ್ ಚಿತ್ರಕ್ಕೆ ಸಂದೀಪ್ ವಲ್ಲೂರಿ ಅವರ ಛಾಯಾಗ್ರಹಣ ಮತ್ತು ರವಿ ಬಸ್ರೂರ್ ಅವರ ಸಂಗೀತ ಸಂಯೋಜನೆಯಿದೆ

ಈ ಚಿತ್ರವು ಅದರ ಕಥೆಗೆ ಸ್ಫೂರ್ತಿ ನೀಡಿದ ಕರಾವಳಿಯ ಸುತ್ತಮುತ್ತ ಚಿತ್ರೀಕರಣಕ್ಕೆ ಯೋಜನೆ ರೂಪಿಸಲಾಗಿದೆ. ಇದು ಈಗಾಗಲೇ ದೃಶ್ಯ ಮತ್ತು ಕಂಟೆಂಟ್ ಆಧಾರಿತ ಮಹತ್ವಾಕಾಂಕ್ಷೆಯ ಯೋಜನೆಯಾಗಿ ರೂಪುಗೊಳ್ಳುತ್ತಿದೆ' ಎಂದು ನಾಗೇಂದ್ರ ಗಾಣಿಗ ಹೇಳುತ್ತಾರೆ.

# ಡಾರ್ಲಿಂಗ್ ಕೃಷ್ಣ ನಟನೆಯ ಬ್ರ್ಯಾಟ್‌ನ 'ಗಂಗಿ ಗಂಗಿ' ಹಾಡು ರಿಲೀಸ್; ಸಿನಿಮಾ ಬಿಡುಗಡೆ

ನಟ ಡಾರ್ಲಿಂಗ್ ಕೃಷ್ಣ ನಟನೆಯ ಬ್ರ್ಯಾಟ್ ಚಿತ್ರದ ಮತ್ತೊಂದು ಹಾಡು 'ಗಂಗಿ ಗಂಗಿ' ಬಿಡುಗಡೆಯಾಗಿದ್ದು, ತೀವ್ರ ಕುತೂಹಲ ಕೆರಳಿಸಿದೆ. ಬಾಲು ಬೆಳಗುಂದಿ ಮತ್ತು ಇಂದು ನಾಗರಾಜ್ ಹಾಡಿರುವ, ಅರ್ಜುನ್ ಜನ್ಯ ಸಂಗೀತ ಸಂಯೋಜಿಸಿರುವ ಈ ಹಾಡನ್ನು ಇತ್ತೀಚೆಗೆ ಸಾವಿರಾರು ಅಭಿಮಾನಿಗಳ ಸಮ್ಮುಖದಲ್ಲಿ ಅನಾವರಣಗೊಳಿಸಲಾಯಿತು. ಈ ಹಾಡು ಈಗಾಗಲೇ ಮೆಚ್ಚುಗೆ ಪಡೆದಿದೆ.

'ನಾನು ಜಾನಪದ ಗೀತೆಗಳೊಂದಿಗೆ ಪ್ರಾರಂಭಿಸಿದೆ ಮತ್ತು ನಂತರ ಅರ್ಜುನ್ ಜನ್ಯ ಮೂಲಕ ಈ ಅವಕಾಶ ಸಿಕ್ಕಿತು. ಈ ಹಾಡಿನ ಮೂಲಕ ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ನಿರ್ದೇಶಕರು ಮತ್ತು ನಿರ್ಮಾಪಕರಿಗೆ ನಾನು ಕೃತಜ್ಞನಾಗಿದ್ದೇನೆ' ಎಂದು ಸಾಹಿತ್ಯ ಬರೆದ ಬಾಲು ಬೆಳಗುಂದಿ ಹೇಳುತ್ತಾರೆ.

'ಬಾಲು ಬೆಳಗುಂದಿ ಅವರ ಸಾಹಿತ್ಯ ಮತ್ತು ಗಾಯನವು ಅರ್ಜುನ್ ಜನ್ಯ ಅವರ ಸಂಗೀತದೊಂದಿಗೆ ಸೇರಿಕೊಂಡು ಮಾಂತ್ರಿಕವಾಗಿದೆ. ಈ ಹಾಡು ಬ್ರ್ಯಾಟ್‌ಗೆ ಹೊಸ ಶಕ್ತಿಯನ್ನು ತರುತ್ತದೆ ಮತ್ತು ನಿರ್ದೇಶಕ ಶಶಾಂಕ್ ಅವರೊಂದಿಗಿನ ನಮ್ಮ ಕೆಮಿಸ್ಟ್ರಿಯನ್ನು ಪ್ರದರ್ಶಿಸುತ್ತದೆ' ಎಂದು ಡಾರ್ಲಿಂಗ್ ಕೃಷ್ಣ ತಿಳಿಸಿದರು.

'ಬ್ರ್ಯಾಟ್ ಒಂದು ಹೃದಯವಂತ ಆಕ್ಷನ್-ಥ್ರಿಲ್ಲರ್ ಚಿತ್ರವಾಗಿದೆ. ಗಂಗಿ ಗಂಗಿ ಹಾಡು ಚಿತ್ರಕ್ಕೆ ಅಭಿಮಾನಿಗಳು ಆನಂದಿಸುವ ಮೋಜಿನ, ಉತ್ಸಾಹವನ್ನು ಸೇರಿಸಿದೆ' ಎಂದು ನಿರ್ದೇಶಕ ಶಶಾಂಕ್ ಹೇಳುತ್ತಾರೆ. ಬ್ರ್ಯಾಟ್ ಮೂಲಕ ಪದಾರ್ಪಣೆ ಮಾಡುತ್ತಿರುವ ನಟಿ ಮನೀಷಾ ಕಂದಕೂರ್, 'ಗಂಗಿ ಗಂಗಿ' ಹಾಡು ಅದ್ಭುತವಾಗಿದೆ ಮತ್ತು ಇದು





ನಾನು ನಿರ್ವಹಿಸಿರುವ ಮಧ್ಯಮ ವರ್ಗದ ಹುಡುಗಿಯ ಪಾತ್ರಕ್ಕೆ ನಿಜವಾಗಿಯೂ ಪೂರಕವಾಗಿದೆ' ಎಂದು ಅವರು ಹೇಳುತ್ತಾರೆ.

ನಟ ಡಾರ್ಲಿಂಗ್ ಕೃಷ್ಣ ನಟನೆಯ ಬ್ರ್ಯಾಟ್ ಚಿತ್ರದ ಮತ್ತೊಂದು ಹಾಡು 'ಗಂಗಿ ಗಂಗಿ' ಬಿಡುಗಡೆಯಾಗಿದ್ದು, ತೀವ್ರ ಕುತೂಹಲ ಕೆರಳಿಸಿದೆ. ಬಾಲು ಬೆಳಗುಂದಿ ಮತ್ತು ಇಂದು ನಾಗರಾಜ್ ಹಾಡಿರುವ, ಅರ್ಜುನ್ ಜನ್ಯ ಸಂಗೀತ ಸಂಯೋಜಿಸಿರುವ ಈ ಹಾಡನ್ನು ಇತ್ತೀಚೆಗೆ ಸಾವಿರಾರು ಅಭಿಮಾನಿಗಳ ಸಮ್ಮುಖದಲ್ಲಿ ಅನಾವರಣಗೊಳಿಸಲಾಯಿತು. ಈ ಹಾಡು ಈಗಾಗಲೇ ಮೆಚ್ಚುಗೆ ಪಡೆದಿದೆ.

'ನಾನು ಜಾನಪದ ಗೀತೆಗಳೊಂದಿಗೆ ಪ್ರಾರಂಭಿಸಿದೆ ಮತ್ತು ನಂತರ ಅರ್ಜುನ್ ಜನ್ಯ ಮೂಲಕ ಈ ಅವಕಾಶ ಸಿಕ್ಕಿತು. ಈ ಹಾಡಿನ ಮೂಲಕ ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ನಿರ್ದೇಶಕರು ಮತ್ತು ನಿರ್ಮಾಪಕರಿಗೆ ನಾನು ಕೃತಜ್ಞನಾಗಿದ್ದೇನೆ' ಎಂದು ಸಾಹಿತ್ಯ ಬರೆದ ಬಾಲು ಬೆಳಗುಂದಿ ಹೇಳುತ್ತಾರೆ.

'ಬಾಲು ಬೆಳಗುಂದಿ ಅವರ ಸಾಹಿತ್ಯ ಮತ್ತು ಗಾಯನವು ಅರ್ಜುನ್ ಜನ್ಯ ಅವರ ಸಂಗೀತದೊಂದಿಗೆ ಸೇರಿಕೊಂಡು ಮಾಂತ್ರಿಕವಾಗಿದೆ. ಈ ಹಾಡು ಬ್ರ್ಯಾಟ್‌ಗೆ ಹೊಸ ಶಕ್ತಿಯನ್ನು ತರುತ್ತದೆ ಮತ್ತು ನಿರ್ದೇಶಕ ಶಶಾಂಕ್ ಅವರೊಂದಿಗಿನ ನಮ್ಮ ಕೆಮಿಸ್ಟ್ರಿಯನ್ನು ಪ್ರದರ್ಶಿಸುತ್ತದೆ' ಎಂದು ಡಾರ್ಲಿಂಗ್ ಕೃಷ್ಣ ತಿಳಿಸಿದರು.

'ಬ್ರ್ಯಾಟ್ ಒಂದು ಹೃದಯವಂತ ಆಕ್ಷನ್-ಥ್ರಿಲ್ಲರ್ ಚಿತ್ರವಾಗಿದೆ. ಗಂಗಿ ಗಂಗಿ ಹಾಡು ಚಿತ್ರಕ್ಕೆ ಅಭಿಮಾನಿಗಳು ಆನಂದಿಸುವ ಮೋಜಿನ, ಉತ್ಸಾಹವನ್ನು ಸೇರಿಸಿದೆ' ಎಂದು ನಿರ್ದೇಶಕ ಶಶಾಂಕ್ ಹೇಳುತ್ತಾರೆ. ಬ್ರ್ಯಾಟ್ ಮೂಲಕ ಪದಾರ್ಪಣೆ ಮಾಡುತ್ತಿರುವ ನಟಿ ಮನೀಷಾ ಕಂದಕೂರ್, 'ಗಂಗಿ ಗಂಗಿ' ಹಾಡು ಅದ್ಭುತವಾಗಿದೆ ಮತ್ತು ಇದು ನಾನು ನಿರ್ವಹಿಸಿರುವ ಮಧ್ಯಮ ವರ್ಗದ ಹುಡುಗಿಯ ಪಾತ್ರಕ್ಕೆ ನಿಜವಾಗಿಯೂ ಪೂರಕವಾಗಿದೆ' ಎಂದು ಅವರು ಹೇಳುತ್ತಾರೆ.

# ಉದಾತ್ತ ಹೃದಯ ಮತ್ತು ಸರಳತೆ': ಜನ್ಮದಿನಕ್ಕೆ ಶುಭ ಕೋರಿದ ಶಿವಣ್ಣಗೆ ಧನ್ಯವಾದ ಹೇಳಿದ ನಟ Pawan Kalyan



**ಬೆಂಗಳೂರು:** ತಮ್ಮ ಜನ್ಮದಿನವನ್ನು ವಿಶೇಷವಾಗಿ ಆಚರಿಸಿದ ಸ್ಯಾಂಡಲ್ ವುಡ್ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ **(ShivarajKumar)**ಗೆ ಟಾಲಿವುಡ್ ಪವರ್ ಸ್ಟಾರ್ ಪವನ್ ಕಲ್ಯಾಣ್ (Pawan Kalyan) ಧನ್ಯವಾದ ಅರ್ಪಿಸಿದ್ದಾರೆ.

ನಟ ಶಿವರಾಜ್ ಕುಮಾರ್ ಟಾಲಿವುಡ್ ಸ್ಟಾರ್ ಪವನ್ ಕಲ್ಯಾಣ್ ಅವರ ಜನ್ಮದಿನವನ್ನು ವಿಶೇಷವಾಗಿ ಆಚರಿಸಿದ್ದರು. ನಟ ಪವನ್ ಕಲ್ಯಾಣ್ ಅವರ ಅಭಿಮಾನಿಗಳ ಜೊತೆ ಕೇಕ್ ಕೇಕ್ ಕತ್ತರಿಸುವ ಮೂಲಕ ನಟ ಶಿವರಾಜ್ ಕುಮಾರ್ ಪವನ್ ಕಲ್ಯಾಣ್ ಅವರ ಜನ್ಮ ದಿನಾಚರಣೆ ಮಾಡಿ ವಿಶೇಷವಾಗಿ ಶುಭ ಹಾರೈಸಿದ್ದರು.

ಅಲ್ಲದೆ ಈ ಕುರಿತು ಟ್ವೀಟ್ ಮಾಡಿರುವ ಶಿವಣ್ಣ, 'ನಾನು ಅವರ ಜನ್ಮದಿನಾಚರಣೆಯಲ್ಲಿ ಭಾಗವಹಿಸುವುದು ಅವರಿಗೆ ಸಂತೋಷವನ್ನು ನೀಡಿದರೆ, ನಾನು ಅದನ್ನು ಹಲವು ಬಾರಿ ಮಾಡುತ್ತೇನೆ. ನಿಮ್ಮ ಮೇಲಿನ ಅವರ ಪ್ರೀತಿ ಯಾವಾಗಲೂ ನಿಮ್ಮ ಶಕ್ತಿಯಾಗಿರುತ್ತದೆ. ನಿಮಗೆ ಹುಟ್ಟುಹಬ್ಬದ ಶುಭಾಶಯಗಳು ಪವನ್ ಕಲ್ಯಾಣ್ ಅವರೇ. ಬೆಳೆಯುತ್ತಲೇ ಇರಿ, ಸ್ಫೂರ್ತಿ ನೀಡುತ್ತಾ ಇರಿ, ದೇವರು ನಿಮ್ಮನ್ನು ಆಶೀರ್ವದಿಸಲಿ! ಎಂದು ಟ್ವೀಟ್ ಮಾಡಿದ್ದರು.

ಇದಕ್ಕೆ ನಟ ಪವನ್ ಕಲ್ಯಾಣ್ ಕೂಡ ಪ್ರತಿಕ್ರಿಯೆ ನೀಡಿ 'ಉದಾತ್ತ ಹೃದಯ ಮತ್ತು ಸರಳತೆ' ಎಂದು ಪ್ರತಿಕ್ರಿಯಿಸಿದ್ದರು.

ಈ ಕುರಿತು ಎಕ್ಸ್ ನಲ್ಲಿ ಟ್ವೀಟ್ ಮಾಡಿರುವ ನಟ ಪವನ್ ಕಲ್ಯಾಣ್, 'ಕರುನಾಡ ಚಕ್ರವರ್ತಿ ಶ್ರೀ ಶಿವರಾಜ್ ಕುಮಾರ್, ನಮ್ಮ 'ಗಂಧದ ಗುಡಿ' ನಾಯಕ ಮತ್ತು ನನ್ನ ನೆಚ್ಚಿನ ಕನ್ನಡ ಐಕಾನ್ ಡಾ. ರಾಜ್‌ಕುಮಾರ್ ಅವರು ಅವರ ಪುತ್ರ. ಅವರು ನನ್ನ ಅಭಿಮಾನಿಗಳೊಂದಿಗೆ ನನ್ನ ಹುಟ್ಟುಹಬ್ಬದ ಆಚರಣೆಯಲ್ಲಿ ಭಾಗವಹಿಸುತ್ತಿರುವುದು ನನಗೆ ಅಪಾರ ಸಂತೋಷವನ್ನುಂಟು ಮಾಡಿದೆ' ಎಂದಿದ್ದಾರೆ.

ಅಂತೆಯೇ 'ಈ ನಡೆ ಅವರ ಉದಾತ್ತ ಹೃದಯ ಮತ್ತು ಸರಳತೆಯನ್ನು ಪ್ರತಿಬಿಂಬಿಸುತ್ತದೆ. ಕುಕ್ಕೆ ಸುಬ್ರಹ್ಮಣ್ಯ ಸ್ವಾಮಿ ಅವರಿಗೆ ಸಂಪೂರ್ಣ ಆರೋಗ್ಯ ಮತ್ತು ಸಂತೋಷವನ್ನು ನೀಡಿ, ಅವರ ಗಮನಾರ್ಹ ಪ್ರದರ್ಶನಗಳಿಂದ ಲಕ್ಷಾಂತರ ಅಭಿಮಾನಿಗಳಿಗೆ ಸ್ಫೂರ್ತಿ ಮತ್ತು ಮನರಂಜನೆಯನ್ನು ನೀಡುವುದನ್ನು ಮುಂದುವರಿಸಬೇಕೆಂದು ನಾನು ಹೃತ್ಪೂರ್ವಕವಾಗಿ ಪ್ರಾರ್ಥಿಸುತ್ತೇನೆ' ಎಂದು ಪವನ್ ಕಲ್ಯಾಣ್ ಟ್ವೀಟ್ ಮಾಡಿದ್ದಾರೆ.

# ಗಂಡು ಮಗುವಿಗೆ ಜನ್ಮ ನೀಡಿದ ನಟಿ ಲಾವಣ್ಯ ತ್ರಿಪಾಠಿ; ಮೊದಲ ಮಗುವನ್ನು ಸ್ವಾಗತಿಸಿದ ವರುಣ್ ತೇಜ್!

**ಹೈದರಾಬಾದ್:** ಟಾಲಿವುಡ್‌ನ ಸ್ಟಾರ್ ದಂಪತಿಯಾಗಿರುವ ವರುಣ್ ತೇಜ್ ಮತ್ತು ಲಾವಣ್ಯ ತ್ರಿಪಾಠಿ ಬುಧವಾರ ಗಂಡು ಮಗುವನ್ನು ಸ್ವಾಗತಿಸಿದ್ದಾರೆ. ತಾಯಿ ಮತ್ತು ಮಗು ಇಬ್ಬರೂ ಆರೋಗ್ಯವಾಗಿದ್ದಾರೆ.

ಹೈದರಾಬಾದ್‌ನ ಖಾಸಗಿ ಆಸ್ಪತ್ರೆಯಲ್ಲಿ ನಾರ್ಮಲ್ ಡೆಲಿವರಿ ಮೂಲಕ ಮಗು ಜನಿಸಿದೆ ಎಂದು ಕುಟುಂಬದ ಆಪ್ತ ಮೂಲಗಳು



ತಿಳಿಸಿವೆ. ದಂಪತಿಗೆ ಇದೀಗ ಅಭಿಮಾನಿಗಳು ಮತ್ತು ಸೆಲೆಬ್ರಿಟಿಗಳು ಶುಭಾಶಯಗಳನ್ನು ಸಲ್ಲಿಸುತ್ತಿದ್ದಾರೆ.34 ವರ್ಷದ ಲಾವಣ್ಯ ತ್ರಿಪಾಠಿ ಮತ್ತು 35 ವರ್ಷದ ವರುಣ್ ತೇಜ್ ಐದು ವರ್ಷ ಡೇಟಿಂಗ್ ಮಾಡಿದ ನಂತರ 2023ರ ನವೆಂಬರ್‌ನಲ್ಲಿ ವಿವಾಹವಾದರು. ಮಿಸ್ಟರ್ ಚಿತ್ರೀಕರಣದ ಸಮಯದಲ್ಲಿ ಈ ಜೋಡಿ ಪ್ರೀತಿಯಲ್ಲಿ ಬಿದ್ದಿತ್ತು. ಆದರೆ, ದೀರ್ಘಕಾಲದವರೆಗೆ ತಮ್ಮ ಸಂಬಂಧವನ್ನು ಗೌಪ್ಯವಾಗಿಟ್ಟಿತ್ತು.2025ರ ಮೇನಲ್ಲಿ, ದಂಪತಿ ತಮ್ಮ ಮೊದಲ ಮಗುವಿನ ನಿರೀಕ್ಷೆಯ ಸುದ್ದಿಯನ್ನು ಸಾಮಾಜಿಕ ಮಾಧ್ಯಮದಲ್ಲಿ ಘೋಷಿಸಿದ್ದರು.

